ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೬೩

ಪಟ್ಟಿ – ೧೫

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಸೋಮವಾರ, ದಿನಾಂಕ : ೨೩ನೇ ಮಾರ್ಚ್, ೨೦೨೦

ಸಮೂಹ – I

೧. ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.

೨. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

೪. ವೈದ್ಯಕೀಯ ಶಿಕ್ಷಣ ಸಚಿವರು.

೫. ಅರಣ್ಯ ಸಚಿವರು.

೬. ಕಾರ್ಮಿಕ ಮತ್ತು ಸಕ್ಕರೆ ಸಚಿವರು.

ಒತ್ತುವರಿಯಾಗಿರುವ ಅರಣ್ಯ ಪ್ರದೇಶ ತೆರವು ಬಗ್ಗೆ

ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು):–

೧೪೧೧ (೧೬೮೬) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒತ್ತುವರಿಯಾಗಿರುವ ಒಟ್ಟು ಅರಣ್ಯ ಪ್ರದೇಶದ ಅಂದಾಜು ಸರ್ಕಾರಕ್ಕಿದೆಯೇ ; ಹಾಗಿದ್ದಲ್ಲಿ, ಪ್ರದೇಶವಾರು ಪ್ರತ್ಯೇಕ ಮಾಹಿತಿ ಒದಗಿಸುವುದು ;

(ಆ) ಒತ್ತುವರಿಯಾಗಿರುವ ಅರಣ್ಯ ಪ್ರದೇಶವನ್ನು ತೆರವುಗೊಳಿಸಿ ಮತ್ತೆ ಇಲಾಖೆಯ ವಶಕ್ಕೆ ಸುಪರ್ದಿಗೆ ತೆಗೆದುಕೊಳ್ಳುವಲ್ಲಿ ಸರ್ಕಾರ ಯಾವ ಕ್ರಮಗಳನ್ನು ಅನುಸರಿಸುತ್ತದೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ವೈಯಕ್ತಿಕ ಹಿತಾಸಕ್ತಿಯಿಂದಾಗಿ ಅರಣ್ಯ ಪ್ರದೇಶವನ್ನು ಒತ್ತುವರಿ ಮಾಡಿ ಸರ್ಕಾರಕ್ಕೆ ವಂಚಿಸಿರುವ ವ್ಯಕ್ತಿಗಳ/ಸಂಸ್ಥೆಗಳ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ ; ಹಾಗಿದ್ದಲ್ಲಿ, ಅಂತಹ ವ್ಯಕ್ತಿಗಳ ವಿರುದ್ಧ ಕೈಗೊಂಡಿರುವ ಕ್ರಮಗಳ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು ;

(ಈ) ಒತ್ತುವರಿ ತೆರವು ನಂತರದಲ್ಲಿ ವಶಪಡಿಸಿಕೊಳ್ಳಲಾದ ಅರಣ್ಯ ಪ್ರದೇಶವನ್ನು ಅಭಿವೃದ್ಧಿಗೊಳಿಸುವ ನಿಟ್ಟಿನಲ್ಲಿ ಸರ್ಕಾರದ ಮುಂದಿನ ಕ್ರಮಗಳೇನು ? (ಮಾಹಿತಿ ಒದಗಿಸುವುದು)

ರಾಜ್ಯದಲ್ಲಿ ಕ್ಯಾನ್ಸರ್, ಮಧುಮೇಹ, ಹೃದಯ ರಕ್ತನಾಳ ಮತ್ತು ಪಾರ್ಶ್ವವಾಯು ಕಾಯಿಲೆಗಳ ನಿಯಂತ್ರಣ ಮತ್ತು ತಡೆಗಟ್ಟುವಿಕೆ ಯೋಜನೆ ಅನುಷ್ಠಾನ

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು):–

೧೪೧೨ (೧೭೫೦) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೇಂದ್ರ ಸರ್ಕಾರದ ಸಹಯೋಗದಿಂದ ಕ್ಯಾನ್ಸರ್, ಮಧುಮೇಹ ಹೃದಯ ರಕ್ತನಾಳ ಮತ್ತು ಪಾರ್ಶ್ವವಾಯು ರೋಗಗಳ ತಡೆಗಟ್ಟುವಿಕೆ ಮತ್ತು ನಿಯಂತ್ರಣ (NPCDCS) ಯೋಜನೆ ಅಡಿಯಲ್ಲಿ ಆಯ್ದ ಜಿಲ್ಲೆಗಳಲ್ಲಿ ಈ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ವಿಶ್ವ ಆರೋಗ್ಯ ಸಂಸ್ಥೆ ಇತ್ತೀಚಿನ ವರ್ಷಗಳ ಅಧ್ಯಯನಗಳ ಪ್ರಕಾರ ಭಾರತದಲ್ಲಿ ಈ ಮೇಲ್ಕಂಡ ಕಾಯಿಲೆಗಳಿಂದ ಶೇ.೬೨ ರಷ್ಟು ಜನರು ಸಾವು–ನೋವುಗಳಿಗೆ ಬಲಿಯಾಗುತ್ತಿರುವುದು ರಾಜ್ಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ವರದಿ ಪ್ರಕಾರ ರಾಜ್ಯದಲ್ಲಿ ಸದರಿ ಮೇಲ್ಕಂಡ ಕಾಯಿಲೆಗಳಿಂದ ಬಳಲುತ್ತಿರುವ ಜನರ ಸಂಖ್ಯೆ ಎಷ್ಟು ಮತ್ತು ಯಾವ ಯಾವ ಜಿಲ್ಲೆಗಳಲ್ಲಿ ಈ ಕಾಯಿಲೆಗಳು ಅತಿ ಹೆಚ್ಚಾಗಿ ಕಂಡು ಬರುತ್ತಿದೆ ; (ಪೂರ್ಣ ಮಾಹಿತಿ ನೀಡುವುದು)

(ಇ) ಕೇಂದ್ರ ಸರ್ಕಾರದ ಮೇಲ್ಕಂಡ ಯೋಜನೆ ಅಡಿ ರಾಜ್ಯದಲ್ಲಿ ಈ ಕಾಯಿಲೆಗಳನ್ನು ತಡೆಗಟ್ಟಲು ಆಯ್ಕೆ ಹೊಂದಿರುವ ಜಿಲ್ಲೆಗಳು ಯಾವುವು; ಮತ್ತು ಈ ಜಿಲ್ಲೆಗಳಲ್ಲಿ ಈ ಕಾಯಿಲೆಗಳ ನಿಯಂತ್ರಣ ಮತ್ತು ತಡೆಗಟ್ಟುವಿಕೆಗೆ ಕೇಂದ್ರ ಸರ್ಕಾರದ ಮಾರ್ಗಸೂಚಿ ಪ್ರಕಾರ ಅನುಷ್ಠಾನಗೊಳಿಸುತ್ತಿರುವ ಕಾರ್ಯಕ್ರಮಗಳೇನು ಮತ್ತು ಈ ಯೋಜನೆಗಳ ಅನುಷ್ಠಾನದಿಂದ ಬಂದಿರುವ ಫಲಿತಾಂಶಗಳೇನು ;

(ಈ) ಈ ಯೋಜನೆಯನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನಡುವೆ ಯಾವ ಅನುಪಾತದ ಸಹಕಾರದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ ಮತ್ತು ಇದುವರೆಗೂ ಎಷ್ಟು ಅನುದಾನ ಬಿಡುಗಡೆ ಆಗಿದೆ? (ಖರ್ಚು ಒಳಗೊಂಡಂತೆ ಪೂರ್ಣ ಮಾಹಿತಿ ನೀಡುವುದು)

ಬೀದರ್ ಜಿಲ್ಲೆಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಶುಶ್ರೂಷಕಿಯರ ಹುದ್ದೆಗಳ ಕುರಿತು

ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–

೧೪೧೩ (೧೭೧೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಶುಶ್ರೂಷಕಿಯರ (ನರ್ಸ್) ಮಂಜೂರಾತಿ ಹುದ್ದೆಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಖಾಲಿ ಇರುವುದು ಎಷ್ಟು ; ಭರ್ತಿ ಮಾಡಿದ್ದರೆ ಯಾವ ಯಾವ ನಿಯಮದ ಪ್ರಕಾರ ಭರ್ತಿ ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಹೊರಗುತ್ತಿಗೆ ಆಧಾರದ ಮೇಲೆ 'ಡಿ' ಗ್ರೂಪ್ ನೌಕರರ ನೇಮಕಾತಿ ಮಾಡಲಾಗಿದೆಯೇ ; ಮಾಡಿದ್ದಲ್ಲಿ, ಯಾವ ನಿಯಮದ ಪ್ರಕಾರ ಮತ್ತು ಯಾವ ಆಧಾರದ ಮೇಲೆ, ಯಾರ ಅಧ್ಯಕ್ಷತೆಯಲ್ಲಿ ನೇಮಕಾತಿ ಮಾಡಲಾಗಿದೆ ; ನೇಮಕಾತಿಗಾಗಿ ಪತ್ರಿಕಾ ಪ್ರಕಟಣೆ ಹೊರಡಿಸಲಾಗಿದೆಯೇ ? (ಸಂಪೂರ್ಣ ಮಾಹಿತಿ ನೀಡುವುದು)

ಬೀದರ್ ಜಿಲ್ಲೆಯ ಬ್ರಿಮ್ಸ್ ಕಾಲೇಜು ಮತ್ತು ಆಸ್ಪತ್ರೆ ನರ್ಸ್‌ಗಳ ಕುರಿತು

ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–

೧೪೧೪ (೧೭೧೫) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಬ್ರಿಮ್ಸ್ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಶುಶ್ರೂಷಕಿಯರು (ನರ್ಸ್) ಹಾಗೂ 'ಡಿ' ಗ್ರೂಪ್ ನೌಕರರ ಮಂಜೂರಾತಿಯಾದ ಹುದ್ದೆಗಳು ಎಷ್ಟು ;

(ಆ) ಅದರಲ್ಲಿ, ಖಾಯಂ ಇರುವವರ ಸಂಖ್ಯೆ ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ತೆಗೆದುಕೊಂಡ ನೌಕರರ ಸಂಖ್ಯೆ ಎಷ್ಟು ; ಅವರನ್ನು ನೇಮಕಾತಿ ಮಾಡಲು ಯಾವ ನಿಯಮವನ್ನು ಅನುಸರಿಸಲಾಗಿದೆ ಹೊರಗುತ್ತಿಗೆಯಿಂದ ನೇಮಕ ಮಾಡಲು ಪತ್ರಿಕಾ ಜಾಹೀರಾತು ಹೊರಡಿಸಲಾಗಿದೆಯೇ ; ಮತ್ತು ನೇಮಕಾತಿಗಾಗಿ ಯಾವ ಪ್ರಕ್ರಿಯೆಯನ್ನು ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಬ್ರಿಮ್ಸ್ ಕಾಲೇಜಿನಲ್ಲಿ ಎರವಲು ಸೇವೆಯ ಮೇಲೆ ಬಂದ ನೌಕರರು ಅವ್ಯವಹಾರದಲ್ಲಿ ಪಾಲ್ಗೊಂಡಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಆ ನೌಕರರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಎರವಲು ಸೇವೆಯ ಮೇಲೆ ಬಂದ ನೌಕರರು ಅದೇ ಸ್ಥಳದಲ್ಲಿ ಮುಂದುವರೆಯುಲು ಕಾರಣವೇನು ; ಅದೇ ಸ್ಥಳದಲ್ಲಿ ಮುಂದುವರಿಸಿದ್ದು ಯಾವ ಉದ್ದೇಶಕ್ಕಾಗಿ ?

ಬೀದರ್ ಬ್ರಿಮ್ಸ್ ಕಾಲೇಜಿನಲ್ಲಿ ನಡೆದ ಅವ್ಯವಹಾರದ ಬಗ್ಗೆ

ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–

೧೪೧೫ (೧೬೮೩) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬ್ರಿಮ್ಸ್ ಕಾಲೇಜಿನಲ್ಲಿ ನಡೆದಿದೆ ಎನ್ನಲಾದ ರೂ.೧೮.೦೦ ಕೋಟಿ ಅವ್ಯವಹಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾರ ಯಾರ ಮೇಲೆ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ?

ಕಲಬುರಗಿ ಕೇಂದ್ರೀಯ ವಿಶ್ವವಿದ್ಯಾಲಯದ ವಿಭಾಗಗಳು ಹಾಗೂ ಹುದ್ದೆಗಳ ಕುರಿತು

ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–

೧೪೧೬ (೧೭೧೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಕೌಶಾಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಕೇಂದ್ರೀಯ ವಿಶ್ವವಿದ್ಯಾಲಯಕ್ಕೆ ಎಷ್ಟು ವಿಭಾಗಗಳು ಮಂಜೂರಾಗಿವೆ ;

(ಆ) ಎಲ್ಲಾ ವಿಭಾಗಗಳಿಗೆ ಎಷ್ಟು ಹುದ್ದೆಗಳು ಮಂಜೂರಾತಿಯಾಗಿವೆ ; ಮಂಜೂರಾತಿಯಾದ ಎಲ್ಲಾ ಹುದ್ದೆಗಳು ಭರ್ತಿಯಾಗಿವೆಯೇ ಮತ್ತು ಇನ್ನೂ ಖಾಲಿ ಉಳಿದ ಹುದ್ದೆಗಳು ಎಷ್ಟು ; ಅವುಗಳನ್ನು ಭರ್ತಿ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ ; ಇದ್ದಲ್ಲಿ, ಯಾವಾಗ ಭರ್ತಿ ಮಾಡಲಾಗುವುದು ; (ಸಂಪೂರ್ಣ ವಿವರ ನೀಡುವುದು)

(ಇ) ಈ ವಿಶ್ವವಿದ್ಯಾಲಯುಕ್ಕಾಗಿ ೨೦೧೯–೨೦೨೦ರವರೆಗೆ ಬಿಡುಗಡೆಯಾದ ಅನುದಾನ ಎಷ್ಟು ಇದರಲ್ಲಿ ಖರ್ಚಾದ ಅನುದಾನ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಈ) ಈ ವಿಶ್ವವಿದ್ಯಾಲಯದಲ್ಲಿ ರೋಸ್ಟರ್ ಪದ್ಧತಿ ಜಾರಿಯಲ್ಲಿದೆಯೇ; ಇದ್ದಲ್ಲಿ, ವಿಭಾಗವಾರು ವಿವರ ನೀಡುವುದು ?

ಕಾಲ್ಪನಿಕ ವೇತನ ಸಮಸ್ಯೆ ಬಗೆಹರಿಸುವ ಬಗ್ಗೆ

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–

೧೪೧೭ (೧೭೪೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಸಂಸ್ಥೆಗಳ ಶಿಕ್ಷಕ ಸಿಬ್ಬಂದಿ ವರ್ಗದವರಿಗೆ ಸೇವೆಗೆ ಸೇರಿದ ದಿನಾಂಕದಿಂದಲೇ ಸೇವಾ ಸೌಲಭ್ಯಗಳನ್ನು ಒದಗಿಸುವ ಕುರಿತು (ಕಾಲ್ಪನಿಕ ವೇತನ ಬಡ್ತಿ) ಸರ್ಕಾರ ತಕ್ಷಣ ಕ್ರಮ ಕೈಗೊಳ್ಳುವುದೇ ;

(ಆ) ಹಿಂದಿನ ಸರ್ಕಾರಗಳು ಈ ಕುರಿತು ಎಷ್ಟು ಸಮಿತಿಗಳನ್ನು ರಚನೆ ಮಾಡಿದ್ದವು ; ಯಾವಾಗ ರಚಿಸಲಾಗಿತ್ತು ; ಆ ಸಮಿತಿಗಳ ವಿವರಗಳನ್ನು ಹಾಗೂ ವರದಿಯ ಪ್ರತಿಗಳನ್ನು ವಿವರಗಳೊಂದಿಗೆ ಒದಗಿಸುವುದು ;

(ಇ) ಸಮಿತಿಗಳ ವರದಿ ಹಾಗೂ ಸರ್ಕಾರದ ಇಲಾಖಾ ಅಧಿಕಾರಿಗಳ ಪ್ರಕಾರ ಸಮಸ್ಯೆ ಪರಿಹರಿಸಲು ತಗುಲಬಹುದಾದ ಅಂದಾಜು ವೆಚ್ಚವೆಷ್ಟು; (ಅಂಕಿ ಅಂಶ ಸಹಿತ ತುಲನೆ ಮಾಡಿ ವಿವರವನ್ನು ನೀಡುವುದು)

(ಈ) ಸೇವೆಗೆ ಸೇರಿದ ದಿನಾಂಕವನ್ನು ಪರಿಗಣಿಸಿ ಪಿಂಚಣಿ, ನಿವೃತ್ತಿ ಎಲ್ಲಾ ಉಪಲಬ್ಧಗಳನ್ನು ಒದಗಿಸಿಕೊಡಲು ಸಮಿತಿಗಳ ವರದಿಯನ್ವಯ ಸರ್ಕಾರ ತಕ್ಷಣ ಕ್ರಮ ಕೈಗೊಂಡು ಕಾರ್ಯಾನ್ವಯಗೊಳಿಸಲು ತೆಗೆದುಕೊಂಡ ಕ್ರಮ ಏನು ; ತೆಗೆದುಕೊಳ್ಳದೇ ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಈ ಸಮಸ್ಯೆಯನ್ನು ಬಗೆಹರಿಸಲಾಗುವುದು ?

ಐ.ಟಿ.ಐ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಬಗ್ಗೆ

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–

೧೪೧೮ (೧೭೦೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಅನುದಾನ ರಹಿತ ಐ.ಟಿ.ಐ ಕಾಲೇಜುಗಳ ಸಂಖ್ಯೆ ಎಷ್ಟು ಮತ್ತು ಅವು ಯಾವುವು ;

(ಆ) ಸದರಿ ಅನುದಾನ ರಹಿತ ಐ.ಟಿ.ಐ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲು ಇರುವ ನಿಯಾಮಾವಳಿಗಳೇನು ; ಸದರಿ ನಿಯಮಗಳ ಅನ್ವಯ ಅನುದಾನ ರಹಿತ ಐ.ಟಿ.ಐ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲಾಗುತ್ತಿದೆಯೇ ;

(ಇ) ಪ್ರಸ್ತುತ ಯಾವ ವರ್ಷದವರೆಗೆ ಅನುದಾನ ರಹಿತ ಐ.ಟಿ.ಐ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲಾಗುತ್ತಿದೆ; ನಿಗದಿಪಡಿಸಿದ ವರ್ಷದವರೆಗೆ ಎಲ್ಲಾ ಐ.ಟಿ.ಐ. ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲಾಗಿದೆಯೇ ;

(ಈ) ಈ ಹಿಂದೆ ಅನುದಾನಕ್ಕೆ ಒಳಪಡಿಸುವ ಕುರಿತು ಸಂಪುಟ ಉಪ ಸಮಿತಿ ಮಾಡಿರುವ ಶಿಫಾರಸ್ಸುಗಳೇನು ? (ಸಂಪೂರ್ಣ ವಿವರ ನೀಡುವುದು)

ಸ್ಥಳಾಂತರ ಹಾಗೂ ಹಸ್ತಾಂತರ ಮಾಡಲಾದ ಶಾಲಾ ಕಾಲೇಜುಗಳ ಅನುದಾನ ಬಗ್ಗೆ

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–

೧೪೧೯ (೧೭೪೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅನುದಾನಿತ ಶಾಲಾ ಕಾಲೇಜುಗಳನ್ನು ಸ್ಥಳಾಂತರ ಮತ್ತು ಹಸ್ತಾಂತರ ಮಾಡಲು ಇರುವ ನಿಯಮಾವಳಿಗಳೇನು ;

(ಆ) ಈ ಹಿಂದೆ ೨೦೧೬ರವರೆಗೆ ಸ್ಥಳಾಂತರ ಹಾಗೂ ಹಸ್ತಾಂತರ ಮಾಡಲಾದ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲಾಗಿದೆಯೇ ; ಪ್ರಸ್ತುತ ಸ್ಥಳಾಂತರ ಮತ್ತು ಹಸ್ತಾಂತರ ಮಾಡಲಾಗುತ್ತಿರುವ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸದಿರಲು ಕಾರಣವೇನು ; ಈ ಹಿಂದೆ ಇದ್ದ ನಿಯಮಾವಳಿಗಳು ಹಾಗೂ ಪ್ರಸ್ತುತ ಇರುವ ನಿಯಮಾವಳಿಗೆ ನಡುವೆ ವ್ಯತ್ಯಾಸವಿದೆಯೇ ;

(ಇ) ಬಾಕಿ ಉಳಿದ ಸ್ಥಳಾಂತರ ಹಾಗೂ ಹಸ್ತಾಂತರ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲು ಸರ್ಕಾರದ ಕ್ರಮವೇನು ; ಯಾವ ಕಾಲಮಿತಿಯೊಳಗೆ ಅನುದಾನಕ್ಕೆ ಒಳಪಡಿಸಲಾಗುವುದು ? (ಸಂಪೂರ್ಣ ವಿವರ ನೀಡುವುದು)

ವಿಜಯಪುರ/ಬಾಗಲಕೋಟೆ/ಬೆಳಗಾವಿ ಜಿಲ್ಲೆಗಳ ಅನುದಾನಿತ ಶಾಲಾ ಕಾಲೇಜುಗಳ ಬಗ್ಗೆ

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–

೧೪೨೦ (೧೭೪೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ವಿಜಯಪುರ ಬಾಗಲಕೋಟೆ, ಬೆಳಗಾವಿ ಹಾಗೂ ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಗಳ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ/ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಲು

ಮುಂಬಡ್ತಿಗಾಗಿ ಬಂದ ಪ್ರಸ್ತಾವನೆಗಳು, ೧೦,೧೫,೨೦,೨೫,೩೦, ವರ್ಷಗಳ ಕಾಲಮಿತಿ ಬಡ್ತಿಗಾಗಿ, ಪ್ರಾಚಾರ್ಯರ ಹುದ್ದೆಗೆ ಅನುಮತಿಗಾಗಿ ಬಂದ ಪ್ರಸ್ತಾವನೆಗಳ ಸಂಖ್ಯೆ ಎಷ್ಟು ; ಕಳೆದ ೦೨ ವರ್ಷಗಳಲ್ಲಿ ಬಂದ ಪ್ರಸ್ತಾವನೆಗಳ ಸಂಖ್ಯೆ ಎಷ್ಟು ; (ಕಾಲೇಜುವಾರು, ಹುದ್ದೆವಾರು ವಿವರ ನೀಡುವುದು)

(ಆ) ಪ್ರಸ್ತಾವನೆಗಳು ಆಯಾ ಜಿಲ್ಲೆಗಳ ಉಪ ನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇಲಾಖೆಗೆ ಬಂದ ದಿನಾಂಕ, ಕಡತ ಸೃಷ್ಠಿಯಾದ ದಿನಾಂಕ ಹಾಗೂ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆಗೆ ಬಂದ ದಿನಾಂಕ, ಕಡತ ಸೃಷ್ಠಿಯಾದ ದಿನಾಂಕ ಹಾಗೂ ಆಯಾ ಕಾಲೇಜುಗಳ ಹುದ್ದೆಗಳನ್ನು ಭರ್ತಿ ಮಾಡಲು ಕೇಳಲಾದ ಮಾಹಿತಿಯ ವಿವರ ಹಾಗೂ ಎಷ್ಟು ಬಾರಿ ಮಾಹಿತಿಗಳನ್ನು ಕೇಳಲಾಗಿದೆ ಎಂಬುದರ ಮಾಹಿತಿಯ ವಿವರದೊಂದಿಗೆ ಒದಗಿಸುವುದು ;

(ಇ) ಪ್ರಸ್ತಾವನೆಗಳು ಇತ್ಯರ್ಥಗೊಂಡು ಅನುಮೋದನೆ ಅಥವಾ ಅನುಮತಿ ಆದೇಶ ನೀಡಲಾದ ದಿನಾಂಕವನ್ನು ಒದಗಿಸುವುದು; ಪ್ರಸ್ತುತ ಎಷ್ಟು ಕಡತಗಳು ಬಾಕಿ ಇವೆ ; ಯಾವ ಕಾರಣಕ್ಕಾಗಿ ಬಾಕಿ ಇವೆ ; ಯಾವ ಕಾಲಮಿಯೊಳಗೆ ಈ ಪ್ರಸ್ತಾವನೆಗಳಿಗೆ ಅನುಮತಿ ನೀಡಿ ಆದೇಶ ನೀಡಲಾಗುವುದು ?

ಫಲಾನುಭವಿಗಳ ಆಯ್ಕೆಗೆ ಇರುವ ಮಾನದಂಡ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೧೪೨೧ (೧೭೩೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಜನರ ಅಭಿವೃದ್ಧಿಗಾಗಿ ಸರ್ಕಾರ ಜಾರಿಗೊಳಿಸಿರುವ ಯೋಜನೆಗಳಾವುವು ; (ವಿವರ ನೀಡುವುದು)

(ಆ) ಈ ಯೋಜನೆಗಳಡಿ ಫಲಾನುಭವಿಗಳ ಆಯ್ಕೆಗೆ ಇರುವ ಮಾನದಂಡಗಳೇನು ; (ಯೋಜನೆವಾರು ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಈ ಯೋಜನೆಯಡಿ ಮಂಡ್ಯ ಜಿಲ್ಲೆಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಖರ್ಚಾಗಿರುವ ಅನುದಾನವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಈ ಯೋಜನೆಗಳ ಸದುಪಯೋಗ ಪಡೆದುಕೊಂಡಿರುವವರು ಯಾರು ? (ಫಲಾನುಭವಿಯ ಹೆಸರು ಮತ್ತು ವಿಳಾಸಗಳನ್ನು ನೀಡುವುದು)

ಮೂಲಭೂತ ಸೌಕರ್ಯಗಳ ಕೊರತೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೧೪೨೨ (೧೭೬೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ನಡೆಯುತ್ತಿರುವ ವಸತಿ ನಿಲಯಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಮೊರಾರ್ಜಿದೇಸಾಯಿ ವಸತಿ ಶಾಲೆಗಳಲ್ಲಿ ಬೋಧಕ/ಬೋಧಕೇತರ ಸಿಬ್ಬಂದಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ಸಿಬ್ಬಂದಿಗಳನ್ನು ತುರ್ತಾಗಿ ನೇಮಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

ಉದ್ಯೋಗಕ್ಕಾಗಿ ವಿಧಿಸಿರುವ ನಿಯಮಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೧೪೨೩ (೧೭೬೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆಗಳ ವ್ಯಾಪ್ತಿಗೆ ಬರುವ ಸಂಸ್ಥೆಗಳು/ಕಾರ್ಖಾನೆಗಳು/ಐ.ಟಿ. ಮತ್ತು ಬಿ.ಟಿ. ವಲಯಗಳಾವುವು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಸಂಸ್ಥೆಗಳ ಉದ್ಯೋಗಕ್ಕಾಗಿ ಸರ್ಕಾರ ವಿಧಿಸಿರುವ ನಿಯಮಗಳಾವುವು ; ಈ ಸಂಸ್ಥೆಗಳು ಪಾಲಿಸಬೇಕಾದ ಮಾನದಂಡಗಳಾವುವು ? (ವಿವರ ನೀಡುವುದು)

ಕಾಲೇಜು ಶಿಕ್ಷಣ ಇಲಾಖೆಯಲ್ಲಿನ ಹುದ್ದೆಗಳ ಮಾಹಿತಿ ಕುರಿತು

ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ):–

೧೪೨೪ (೧೭೭೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಮಂಜೂರಾದ ಹುದ್ದೆಗಳೆಷ್ಟು ; (ಆಯುಕ್ತರ ಹುದ್ದೆಯಿಂದ ಕಾಲೇಜಿನ ಕೆಳಹಂತದ ಹುದ್ದೆಗಳವರೆಗಿನ ಹುದ್ದೆವಾರು ಸಂಖ್ಯೆ ಒದಗಿಸುವುದು)

(ಆ) ಇವುಗಳಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳೆಷ್ಟು ; (ಹುದ್ದೆವಾರು ಮಾಹಿತಿ ನೀಡುವುದು)

(ಇ) ಖಾಲಿ ಇರುವ ಹುದ್ದೆಗಳಿಂದ ಇಲಾಖೆಯ ಕೆಲಸ ಕಾರ್ಯಗಳು ಕುಂಠಿತವಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು ?

ರಾಜ್ಯದಲ್ಲಿ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಸೇವಾ ಭದ್ರತೆ ನೀಡುವ ಕುರಿತು

ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–

೧೪೨೫ (೧೭೭೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಸೇವಾಭದ್ರತೆ ನೀಡುವ ಬಗ್ಗೆ ಕಾನೂನು ಹಾಗೂ ನಿಯಮಾವಳಿಗಳನ್ನು ೨೦೦೫ ರಿಂದ ಅನುಷ್ಠಾನಗೊಳ್ಳುತ್ತಿರುವುದು ನಿಜವೇ ;

(ಆ) ಸರ್ಕಾರ ರೂಪಿಸಿದ ಕಾನೂನು ಹಾಗೂ ನಿಯಮಗಳನ್ನು ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳು ಕಟ್ಟು ನಿಟ್ಟಾಗಿ ಜಾರಿಗೊಳಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಅನುದಾನ ರಹಿತ ಆಡಳಿತ ಮಂಡಳಿಗಳ ವಿರುದ್ಧ ಕಾನೂನಿನನ್ವಯ ಕೈಗೊಂಡ ಕ್ರಮಗಳೇನು ;

(ಈ) ೬ನೇ ವೇತನ ಆಯೋಗದ ಶಿಫಾರಸ್ಸುಗಳನ್ವಯ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳು ತನ್ನ ಸಿಬ್ಬಂದಿಗೆ ಮೂಲವೇತನದ ಸರಿಸಮ ವೇತನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ೬ನೇ ವೇತನ ಆಯೋಗ ಶಿಫಾರಸ್ಸುಗಳನ್ವಯ ಮೂಲವೇತನ ಪಾವತಿಸುವ ಬಗ್ಗೆ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳಿಗೆ ಸೂಕ್ತ ನಿರ್ದೇಶನಗಳನ್ನು ಸರ್ಕಾರ ಹೊರಡಿಸಿದೆಯೇ ;

(ಊ) ಸರ್ಕಾರವು ೬ನೇ ವೇತನ ಆಯೋಗದ ಶಿಫಾರಸ್ಸಿನಂತೆ ಮೂಲವೇತನ ನೀಡದಿರುವ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳ ವಿರುದ್ಧ ಕೈಗೊಂಡಿರುವ ಕ್ರಮಗಳೇನು ?

ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಕಾರ್ಯಭಾರ ಕುರಿತು

ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–

೧೪೨೬ (೧೭೭೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳೆಷ್ಟು ; (ಜಿಲ್ಲಾವಾರು, ವಿಷಯವಾರು ಮಾಹಿತಿ ನೀಡುವುದು)

(ಆ) ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳನ್ನು ತುಂಬಲು ಸರ್ಕಾರ ನಿಗದಿಪಡಿಸಿರುವ ಕಾರ್ಯಭಾರ ಎಷ್ಟು ; ಕಾರ್ಯಭಾರಕ್ಕೆ ಸಂಬಂಧಪಟ್ಟ ಆದೇಶಗಳ ಪ್ರತಿ ಒದಗಿಸುವುದು ;

(ಇ) ಈ ಹಿಂದೆ ಪ್ರತಿ ವಿಷಯಕ್ಕೆ ಒಬ್ಬ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳುವ ಪರಿಪಾಠ ಇದ್ದುದ್ದನ್ನು ಬಿಟ್ಟು, ಅವೈಜ್ಞಾನಿಕವಾಗಿ ಕಾರ್ಯಭಾರ ನಿಗಧಿಪಡಿಸಿರುವುದರಿಂದ ವಿದ್ಯಾರ್ಥಿಗಳ ಪಾಠ ಬೋಧನೆಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ಪರಿಹರಿಸಲು ಕೈಗೊಂಡ ಕ್ರಮಗಳೇನು ;

(ಈ) ಕಾರ್ಯಭಾರ/ಮಕ್ಕಳ ಸಂಖ್ಯೆ ಕಡಿಮೆ ಇರುವ ಕಾಲೇಜುಗಳಿಗೆ ಹುದ್ದೆ ತುಂಬಲು ಅನುಮತಿ ನೀಡುವ ಸಂದರ್ಭದಲ್ಲಿ ಜಿಲ್ಲಾ ವ್ಯಾಪ್ತಿಯಲ್ಲಿನ ಕಾಲೇಜಿನ ಹುದ್ದೆಯನ್ನು ವಿಲೀನಗೊಳಿಸಿ ಎರಡೂ ಕಾಲೇಜುಗಳಿಗೆ ಒಬ್ಬರನ್ನು ನೇಮಿಸಲು ನಿರ್ಧರಿಸಿರುವುದು ನಿಜವೇ ; ನಿಜವಿದ್ದಲ್ಲಿ, ಇದಕ್ಕೆ ಕಾರಣಗಳೇನು ; ಇದರಿಂದ ಮಕ್ಕಳಿಗೆ ಪೂರ್ವ ಪ್ರಮಾಣದ ಬೋಧಕರನ್ನು ನೀಡಿದಂತೆ ಆಗುವುದೇ ಪೂರ್ಣ ಪ್ರಮಾಣದ ಉಪನ್ಯಾಸರಿಲ್ಲದೇ ಆಗುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬೋಧಕ ಹುದ್ದೆಗಳಿಗೆ ೧೬೦-೨೦೦ ವಿದ್ಯಾರ್ಥಿಗಳನ್ನು ನಿಗಧಿಪಡಿಸಿರುವುದರಿಂದ ಮಕ್ಕಳ ಗುಣಮಟ್ಟದ ಶಿಕ್ಷಣದಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ಪರಿಹರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಊ) ಬೋಧಕರಿಗೆ ಪ್ರತಿ ತರಗತಿಗೆ ಇರುವ ೮೦-೧೦೦ ವಿದ್ಯಾರ್ಥಿಗಳ ಸಂಖ್ಯಾಬಲವನ್ನು ಕಡಿಮೆ ಮಾಡಿ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ದೊರಕಿಸಿಕೊಡುವಲ್ಲಿ ಸರ್ಕಾರ ಕೈಗೊಂಡ ಕ್ರಮವೇನು ?

ಪ್ರೌಢಶಾಲಾ ಮತ್ತು ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರಿಗೆ ವಿಶೇಷ ಭತ್ಯೆಯನ್ನು ವೇತನದಲ್ಲಿ ವಿಲೀನಗೊಳಿಸುವ ಬಗ್ಗೆ

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-

೧೪೨೭ (೧೬೮೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಿನಾಂಕ: ೦೧-೦೮-೨೦೦೮ರ ನಂತರ ನೇಮಕಗೊಂಡಿರುವ ಪ್ರೌಢಶಾಲಾ ಸಹ ಶಿಕ್ಷಕರು ಹಾಗೂ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರಿಗೆ ವಿಶೇಷ ಭತ್ಯೆಯನ್ನು ಮೂಲ ವೇತನದಲ್ಲಿ ವಿಲೀನಗೊಳಿಸಲಾಗಿದೆಯೇ ;

(ಆ) ಈ ವಿಷಯವಾಗಿ ಮಾನ್ಯ ಸರ್ವೋಚ್ಛ ನ್ಯಾಯಾಲಯದ ತೀರ್ಪು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಇದನ್ನು ಜಾರಿ ಮಾಡಲು ವಿಳಂಬ ನೀತಿ ಅನುಸರಿಸಲು ಕಾರಣವೇನು ;

(ಈ) ಪದವಿ ಪೂರ್ವ ಕಾಲೇಜುಗಳಲ್ಲಿ ಪಿ.ಹೆಚ್.ಡಿ., ಎಸ್.ಎಲ್.ಇ.ಟಿ., ಎನ್.ಇ.ಟಿ., ಪದವಿ ಹೊಂದಿರುವ ಉಪನ್ಯಾಸಕರಿಗೆ ಸರ್ಕಾರ ನೇಮಿಸಿದ ಕುಮಾರ್ ನಾಯ್ಕ್ ಸಮಿತಿ ಶಿಫಾರಸ್ಸಿನ ಪ್ರಕಾರ ಪದವಿ ಕಾಲೇಜಿಗೆ ಬಡ್ತಿ ನೀಡಲಾಗಿದೆಯೇ ; ಇದಕ್ಕಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

ಐ.ಟಿ.ಐ. ಕಾಲೇಜುಗಳಿಗೆ ಅಲ್ಪಸಂಖ್ಯಾತರ ಸ್ಥಾನಮಾನ ನೀಡುವ ಕುರಿತು

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-

೧೪೨೮ (೧೬೯೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ

ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ (ಐ.ಟಿ.ಐ) ಅಲ್ಪಸಂಖ್ಯಾತರ ಸ್ಥಾನಮಾನವನ್ನು ನೀಡಲಾಗುತ್ತಿದೆಯೇ ;

(ಆ) ನೀಡಲಾಗುತ್ತಿದ್ದಲ್ಲಿ, ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆ ನೀಡಲು ಅನುಸರಿಸುತ್ತಿರುವ ಮಾನದಂಡಗಳೇನು ; (ವಿವರ ಒದಗಿಸುವುದು)

(ಇ) ಕಳೆದ ೩ ವರ್ಷಗಳಿಂದ ಎಷ್ಟು ಕೈಗಾರಿಕಾ ತರಬೇತಿ ಸಂಸ್ಥೆಗಳು ಅಲ್ಪಸಂಖ್ಯಾತ ಸ್ಥಾನಮಾನ ಕೋರಿ ಅರ್ಜಿಗಳನ್ನು ಸಲ್ಲಿಸಿವೆ ; ಎಷ್ಟು ಸಂಸ್ಥೆಗಳಿಗೆ ಅನುಮತಿ ನೀಡಲಾಗಿದೆ ; ಎಷ್ಟು ಪ್ರಕರಣ ಬಾಕಿ ಇದೆ ; ಬಾಕಿ ಇರಲು ಕಾರಣವೇನು ; (ವಿವರ ಒದಗಿಸುವುದು)

(ಈ) ಬಾಕಿ ಇರುವ ಅರ್ಜಿಗಳಿಗೆ ಯಾವ ಕಾಲಮಿತಿಯೊಳಗೆ ಅನುಮತಿ ನೀಡಲಾಗುವುದು ?

ಚಿಕ್ಕಮಗಳೂರು ಜಿಲ್ಲೆಗೆ ಬಾಂಗ್ಲಾ ದೇಶದಿಂದ ಕಾರ್ಮಿಕರು ಬಂದಿರುವ ಕುರಿತು

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–

೧೪೨೫ (೧೬೬೨) ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಗೆ ಬಾಂಗ್ಲಾ ದೇಶದಿಂದ ಕಾರ್ಮಿಕರು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ವಲಸೆ ಬಂದಿರುವ ಕಾರ್ಮಿಕರ ಪೂರ್ಣ ಮಾಹಿತಿ ಸರ್ಕಾರದಲ್ಲಿದೆಯೇ ; ಈ ವಲಸಿಗರನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಕಾರ್ಮಿಕರ ಕಲ್ಯಾಣಕ್ಕಾಗಿ ಸರ್ಕಾರ ಅನುಸರಿಸುತ್ತಿರುವ ಯೋಜನೆಗಳು ಯಾವುವು ;

(ಈ) ಸದರಿ ಯೋಜನೆಗೆ ಚಿಕ್ಕಮಗಳೂರು ಜಿಲ್ಲೆಗೆ ಸರ್ಕಾರದಿಂದ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ? (ವಿವರ ನೀಡುವುದು)

ರಾಜ್ಯದಲ್ಲಿರುವ ಸರ್ಕಾರಿ ವೈದ್ಯಕೀಯ ಕಾಲೇಜುಗಳ ಕುರಿತು

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–

೧೪೩೦ (೧೬೯೩) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸರ್ಕಾರಿ ವೈದ್ಯಕೀಯ ಕಾಲೇಜುಗಳು ಯಾವುವು ; (ವಿವರ ನೀಡುವುದು)

(ಆ) ವೈದ್ಯಕೀಯ ಬೋಧಕರುಗಳಿಗೆ ನೀಡುತ್ತಿರುವ ವೇತನ ಎಷ್ಟು ; (ಕಾಲೇಜು ಹಾಗೂ ವೃಂದವಾರು ವಿವರ ಒದಗಿಸುವುದು)

(ಇ) ವಿಷಯವಾರು ಮಂಜೂರಾದ ಬೋಧಕ ಸಿಬ್ಬಂದಿಗಳ ವಿವರ ಹಾಗೂ ಖಾಲಿ ಇರುವ ಬೋಧಕ ಸಿಬ್ಬಂದಿಗಳ ಹುದ್ದೆವಾರು ವಿವರ ನೀಡುವುದು)

(ಈ) ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರದಿಂದ ತೆಗೆದುಕೊಂಡ ಕ್ರಮವೇನು ;

(ಉ) ಹೊಸದಾಗಿ ವೈದ್ಯಕೀಯ ಕಾಲೇಜುಗಳನ್ನು ಆರಂಭಿಸಲು ರೂಪಿಸಿರುವ ಮಾನದಂಡಗಳೇನು ?

೨೦೨೦-೨೦೨೧ನೇ ಸಾಲಿನಲ್ಲಿ I.I.I.T. ಪ್ರವೇಶಾತಿ ಪ್ರಾರಂಭಿಸುವ ಕುರಿತು

ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):-

೧೪೩೧ (೧೭೧೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರಿನಲ್ಲಿರುವ ಪಿ.ಜಿ. ಕೇಂದ್ರವನ್ನು ಯಾವ ವರ್ಷದಲ್ಲಿ ಪ್ರಾರಂಭಿಸಲಾಗಿದೆ ; ಇದಕ್ಕೆ ಎಷ್ಟು ಎಕರೆ ಜಾಗ ನೀಡಲಾಗಿದೆ ; ಸದರಿ ಪಿ.ಜಿ. ಕೇಂದ್ರಕ್ಕೆ ನೀಡಿರುವ ಮೂಲಭೂತ ಸೌಲಭ್ಯಗಳೇನು ;

(ಆ) ೨೦೧೭-೧೮ ಹಾಗೂ ೨೦೧೮-೧೯ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಪದವಿ ವಿದ್ಯಾರ್ಥಿಗಳಿಗೆ ಲ್ಯಾಪ್‌ಟ್ಯಾಪ್ ವಿತರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಯಚೂರಿನಲ್ಲಿ ಉದ್ದೇಶಿಸಿರುವ ನೂತನ ವಿಶ್ವವಿದ್ಯಾಲಯಕ್ಕೆ ಎಷ್ಟು ಎಕರೆ ಜಾಗ ಗುರುತಿಸಲಾಗಿದೆ ; ಸದರಿ ವಿಶ್ವವಿದ್ಯಾಲಯ ಪ್ರಾರಂಭಿಸಲು ಬೇಕಾಗಿರುವ ಅನುದಾನವನ್ನು ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ರಾಯಚೂರಿನಲ್ಲಿ I.I.I.T. ೨೦೨೦-೨೦೨೧ನೇ ಸಾಲಿನಲ್ಲಿ ಪ್ರವೇಶ ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಇದಕ್ಕೆ ಬೇಕಾಗಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ನೀಡಿರುವ ಅನುದಾನ ಎಷ್ಟು ; ಇದರಲ್ಲಿ ಸ್ಥಳೀಯ ವಿದ್ಯಾರ್ಥಿಗಳಿಗೆ ಪ್ರವೇಶಾತಿ ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

ಶಾಲಾ ಮಕ್ಕಳಿಗೆ ಪ್ರತಿ ವರ್ಷ ನೀಡುವ ಯೋಜನೆಗಳ ಕುರಿತು

ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–

೧೪೩೨ (೧೭೧೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಶಾಲಾ ಮಕ್ಕಳಿಗೆ ಪ್ರತಿ ವರ್ಷ ನೀಡುತ್ತಿರುವ ಕ್ಷೀರಭಾಗ್ಯ ಸಮವಸ್ತ್ರ, ಮಧ್ಯಾಹ್ನದ ಬಿಸಿಯೂಟ, ಶೂ ಮತ್ತು ಸಾಕ್ಸ್, ಸೈಕಲ್ ವಿತರಣೆಗೆ ಸಂಬಂಧಿಸಿದಂತಹ ಎಲ್ಲಾ ಯೋಜನೆಗಳಿಗೆ ಸರ್ಕಾರ ಖರ್ಚು ಮಾಡುತ್ತಿರುವ ಅನುದಾನ ಎಷ್ಟು ?

ರಾಯಚೂರಿನಲ್ಲಿರುವ ಮೆಡಿಕಲ್ ಕಾಲೇಜ್ ಕುರಿತು

ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–

೧೪೩೩ (೧೭೧೦) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರಿನಲ್ಲಿರುವ ಸರ್ಕಾರಿ ಮೆಡಿಕಲ್ ಕಾಲೇಜಿಗೆ ಯಾವ ವರ್ಷದಲ್ಲಿ ಮಂಜೂರಾತಿ ನೀಡಲಾಗಿದೆ ; ಮಂಜೂರಾಗಿರುವ ವರ್ಷದಿಂದ ಇಲ್ಲಿಯವರೆಗೂ ಖರ್ಚು ಮಾಡಿರುವ ಅನುದಾನ ಎಷ್ಟು ;

(ಆ) ಪ್ರಸ್ತುತ ಎಷ್ಟು ವಿದ್ಯಾರ್ಥಿಗಳು ಪ್ರತಿ ವರ್ಷ ಪ್ರವೇಶಾತಿ ಪಡೆಯುತ್ತಿದ್ದಾರೆ ?

ಸೇವಾನಿರತ ಪ್ರಾಥಮಿಕ ಶಾಲೆಗಳ ಪದವೀಧರರ ಕುರಿತು

ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–

೧೪೩೪ (೧೭೭೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸೇವಾನಿರತ ಪ್ರಾಥಮಿಕ ಶಾಲೆಗಳಲ್ಲಿನ ಪದವೀಧರ ಶಿಕ್ಷಕರ ಬೇಡಿಕೆಗಳಾವುವು ; (ವಿವರ ನೀಡುವುದು)

(ಆ) ದಿನಾಂಕ: ೦೭-೦೮-೨೦೧೭ ರಂದು ಪ್ರಕಟಿಸಿರುವ ಕರ್ನಾಟಕ ಶಿಕ್ಷಣ ಇಲಾಖೆಯ ಸೇವೆಗಳ (ಸಾರ್ವಜನಿಕ ಶಿಕ್ಷಣ ಇಲಾಖೆಯ ನೇಮಕಾತಿ ತಿದ್ದುಪಡಿ) ನಿಯಮಗಳಿಗೆ ತಿದ್ದುಪಡಿ ಮಾಡುವ ಬಗ್ಗೆ ಸರ್ಕಾರಕ್ಕೆ ಮನವಿ ಬಂದಿರುವುದು ನಿಜವೇ ;

(ಇ) ಬಂದಿದ್ದಲ್ಲಿ, ನಿಯಮಗಳಿಗೆ ತಿದ್ದುಪಡಿ ತರಲು ಕೈಗೊಂಡ ಕ್ರಮಗಳೇನು ?

(ಈ) ಸೇವಾನಿರತ ಪ್ರಾಥಮಿಕ ಶಾಲಾ ಶಿಕ್ಷಕರ ಎಲ್ಲಾ ಬೇಡಿಕೆಗಳನ್ನು ಈಡೇರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಈ ಕುರಿತು ಸರ್ಕಾರ ಆದೇಶ ಹೊರಡಿಸುವುದು ಯಾವಾಗ ?

ವಿಜ್ಞಾನ ಗುಡ್ಡಗಳಿಗೆ ಕೇಂದ್ರ ಸರ್ಕಾರದಿಂದ ನೆರವು ಬಂದಿರುವ ಬಗ್ಗೆ

ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-

೧೪೩೫ (೧೬೮೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಿಜ್ಞಾನ ಗುಡ್ಡ ಅಂದರೇನು ; ರಾಜ್ಯದಲ್ಲಿ ಎಷ್ಟು ವಿಜ್ಞಾನ ಗುಡ್ಡಗಳಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ವಿಜ್ಞಾನ ಗುಡ್ಡಗಳ ಅಭಿವೃದ್ಧಿಗೆ ಯಾವ ಯಾವ ಮೂಲಗಳಿಂದ ಎಷ್ಟು ಹಣ ಬಿಡುಗಡೆ ಆಗಿದೆ ; ವಿಜ್ಞಾನ ಗುಡ್ಡವಾರು ಮಾಹಿತಿ ನೀಡುವುದು ;

(ಇ) ಬಿಡುಗಡೆಯಾದ ಹಣದಲ್ಲಿ ಎಷ್ಟು ಹಣ ಖರ್ಚಾಗಿದೆ ; ಉಳಿದಿರುವ ಹಣವೆಷ್ಟು ; ಸಂಪೂರ್ಣ ವಿವರಗಳೊಂದಿಗೆ ಮಾಹಿತಿ ನೀಡುವುದು ;

(ಈ) ಈ ವಿಜ್ಞಾನ ಗುಡ್ಡಗಳ ಅಭಿವೃದ್ಧಿಗೆ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಹಣ ಎಷ್ಟು ; ವಿಜ್ಞಾನ ಗುಡ್ಡಗಳವಾರು ಮಾಹಿತಿ ನೀಡುವುದು ;

(ಉ) ತುಮಕೂರು ಜಿಲ್ಲೆಯ ವಿಜ್ಞಾನ ಗುಡ್ಡದ ಅಭಿವೃದ್ಧಿಗೆ ಕೇಂದ್ರ ಸರ್ಕಾರದಿಂದ ಇಲ್ಲಿಯವರೆಗೆ ಬಂದಿರುವ ಅನುದಾನವೆಷ್ಟು ; ಖರ್ಚಾಗಿರುವ ಅನುದಾನವೆಷ್ಟು ? (ವಿವರವಾದ ಮಾಹಿತಿ ನೀಡುವುದು)

ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಕುರಿತು

ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–

೧೪೩೭ (೧೭೭೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ಮಂಜೂರಾದ ಹುದ್ದೆಗಳೆಷ್ಟು ; (ನಿರ್ದೇಶಕರ ಹುದ್ದೆಯಿಂದ ಕೆಳಹಂತದ ಹುದ್ದೆಗಳವರೆಗಿನ ಹುದ್ದೆವಾರು ಸಂಖ್ಯೆ ಒದಗಿಸುವುದು)

(ಆ) ಇವುಗಳಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳೆಷ್ಟು ; (ಹುದ್ದೆವಾರು ಮಾಹಿತಿ ನೀಡುವುದು)

(ಇ) ಖಾಲಿ ಇರುವ ಹುದ್ದೆಗಳಿಂದ ಸರ್ಕಾರದ ಕೆಲಸ ಕಾರ್ಯಗಳು ಕುಂಠಿತವಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು ?

ಶಿಕ್ಷಣ ಇಲಾಖೆಯಲ್ಲಿ ವಿವಿಧ ಹುದ್ದೆಗಳ ತುಂಬುವ ಕುರಿತು

ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–

೧೪೩೭ (೧೭೭೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರೌಢಶಾಲೆಗಳಲ್ಲಿ ಚಿತ್ರಕಲೆ, ಸಂಗೀತ ಮತ್ತು ಕ್ರಾಫ್ಟ್ ಹುದ್ದೆಗಳನ್ನು ತುಂಬಲು ಅನುಮತಿ ನಿರಾಕರಿಸುತ್ತಿರುವುದು ನಿಜವೇ ; ನಿಜವಿದ್ದಲ್ಲಿ, ಕಾರಣಗಳೇನು ;

(ಆ) ಮಕ್ಕಳಿಗೆ ತಮ್ಮಲ್ಲಿನ ಸೂಕ್ತವಾದ ಪ್ರತಿಭೆಯನ್ನು ಹೆಚ್ಚಿಸಿಕೊಳ್ಳಲು ಸದರಿ ಮೂರು ವಿಷಯಗಳು ಉಪಯುಕ್ತವಾಗಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಇ) ಸದರಿ ಹುದ್ದೆಗಳನ್ನು ಪ್ರೌಢಶಾಲೆಗಳಲ್ಲಿ ತುಂಬಬಾರದೆಂಬ ನಿಯಮ ಯಾವ ದಿನಾಂಕದಂದು ಜಾರಿಗೆ ಬಂದಿದೆ ; ಬಂದಿದ್ದಲ್ಲಿ, ಕಾರಣಗಳೇನು ;

(ಈ) ಉಳಿದ ವಿಷಯಗಳಂತೆ ಸದರಿ ವಿಷಯದ ಹುದ್ದೆಯನ್ನು ತುಂಬಲು ಸರ್ಕಾರ ಕೂಡಲೇ ಅನುಮತಿ ನೀಡಲು ಕ್ರಮ ಕೈಗೊಳ್ಳುವುದೇ ?

ಪದವಿ ಪೂರ್ವ ಕಾಲೇಜು ಉಪನ್ಯಾಸಕರ ನೇಮಕಾತಿ ಬಗ್ಗೆ

ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :–

೧೪೩೮ (೧೬೭೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳೆಷ್ಟು ;

(ಆ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ನೇಮಕಾತಿಗೆ ೨೦೧೫ರಲ್ಲಿ ಅಧಿಸೂಚನೆ ಹೊರಡಿಸಿದ್ದರೂ, ಈವರೆವಿಗೂ ನೇಮಕಾತಿಗೆ ಕ್ರಮ ಕೈಗೊಳ್ಳದಿರಲು ಕಾರಣವೇನು ;

(ಈ) ಖಾಲಿ ಇರುವ ಎಲ್ಲಾ ಉಪನ್ಯಾಸಕರುಗಳ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ; ಸದರಿ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ಯಾವಾಗ ?

ರಾಜ್ಯದಲ್ಲಿರುವ ಸಂಸ್ಕೃತ ಶಾಲೆಗಳಿಗೆ ಅನುದಾನ ನೀಡುವ ಬಗ್ಗೆ

ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :-

೧೪೩ (೧೭೪೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಸಂಸ್ಕೃತ ಶಾಲೆಗಳಿವೆ ;

(ಆ) ಈ ಸಂಸ್ಕೃತ ಶಾಲೆಗೆ ಅನುದಾನ ನೀಡುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ ;

(ಇ) ನಡೆಸಿದ್ದಲ್ಲಿ, ಈ ಯೋಜನೆಯಲ್ಲಿ ಎಷ್ಟು ಶಾಲೆಗಳನ್ನು ಸೇರಿಸಿಕೊಳ್ಳಲಾಗಿದೆ ;

(ಈ) ಸೇರಿಸಿಕೊಳ್ಳದಿದ್ದಲ್ಲಿ, ಕಾರಣಗಳೇನು ?

ಆನೆಗಳ ಹಾವಳಿಯಿಂದ ಉಂಟಾಗುತ್ತಿರುವ ನಷ್ಟದ ಕುರಿತು

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೧೪೪೦ (೧೭೦೪) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ಜಿಲ್ಲೆಯಲ್ಲಿ ಆನೆಗಳ ಹಾವಳಿ ಹೆಚ್ಚಾಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಆನೆ ದಾಳಿಗೊಳಗಾದ ಕುಟುಂಬಗಳಿಗೆ ಸರ್ಕಾರ ನೀಡಿರುವ ಪರಿಹಾರವೆಷ್ಟು ; ಈವರೆಗೂ ಎಷ್ಟು ಕುಟುಂಬಗಳಿಗೆ ಪರಿಹಾರ ನೀಡಲಾಗಿದೆ ; (ಫಲಾನುಭವಿಯ ಹೆಸರು ಮತ್ತು ಗ್ರಾಮದ ವಿವರ ನೀಡುವುದು)

(ಇ) ಪರಿಹಾರ ನೀಡದೇ ಬಾಕಿ ಉಳಿದಿರುವ ಕುಟುಂಬಗಳೆಷ್ಟು ; ಪರಿಹಾರ ನೀಡುವಲ್ಲಿ ವಿಳಂಬವಾಗುತ್ತಿರಲು ಕಾರಣಗಳೇನು ; ಯಾವ ಕಾಲಮಿತಿಯಲ್ಲಿ ಉಳಿದ ಕುಟುಂಬಗಳಿಗೆ ಪರಿಹಾರ ನೀಡಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಯೋಜನೆ ಕುರಿತು

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೧೪೪೧ (೧೭೦೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ (ಆರ್.ಎಂ.ಎಸ್.) ಯೋಜನೆಯಡಿ ಹೊಸ ಶಾಲಾ ಕೊಠಡಿಗಳ ನಿರ್ಮಾಣ ಕಾಮಗಾರಿಗಳು ಸ್ಥಗಿತಗೊಂಡಿರುವುದು ಸರ್ಕಾರದ

ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸದರಿ ಯೋಜನೆಯನ್ನು ಮುಂದುವರೆಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ; (ವಿವರ ನೀಡುವುದು)

(ಆ) ಹಾಸನ ಜಿಲ್ಲೆಯಲ್ಲಿ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ (ಆರ್.ಎಂ.ಎಸ್) ಯೋಜನೆಯಡಿ ಸ್ಥಗಿತಗೊಂಡಿರುವ ಹೊಸ ಶಾಲಾ ಕೊಠಡಿಗಳ ನಿರ್ಮಾಣ ಕಾಮಗಾರಿಗಳ ಸಂಪೂರ್ಣ ವಿವರ ನೀಡುವುದು ; ಹಾಗೂ ಈ ಕಾಮಗಾರಿಗಳನ್ನು ಮುಂದುವರೆಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ? (ವಿವರ ನೀಡುವುದು)

ಹಿಂದುಳಿದ ವರ್ಗಗಳ ಇಲಾಖೆಯ ಯೋಜನೆಗಳ ಬಗ್ಗೆ

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೧೪೪೨ (೧೭೦೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಜನರ ಅಭಿವೃದ್ಧಿಗಾಗಿ ಸರ್ಕಾರ ಜಾರಿಗೊಳಿಸಿರುವ ಯೋಜನೆಗಳು ಯಾವುವು ; ಫಲಾನುಭವಿಗಳ ಆಯ್ಕೆಗೆ ಇರುವ ಮಾನದಂಡಗಳು ಯಾವುವು ; (ಯೋಜನೆವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಈ ಯೋಜನೆಗಳಡಿ ಹಾಸನ ಜಿಲ್ಲೆಗೆ ಬಿಡುಗಡೆ ಮಾಡಿದ ಅನುದಾನವೆಷ್ಟು ; ಖರ್ಚಾಗಿರುವ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಯೋಜನೆಗಳ ಸದುಪಯೋಗ ಪಡೆದುಕೊಂಡ ಫಲಾನುಭವಿಗಳ ಹೆಸರು ಮತ್ತು ವಿಳಾಸದೊಂದಿಗೆ ತಾಲ್ಲೂಕುವಾರು ವಿವರ ನೀಡುವುದು ?

ಪಿ.ಜಿ. ಸೀಟುಗಳ ಕುರಿತು

ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–

೧೪೪೩ (೧೬೯) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಪಿ.ಜಿ. (PG) ಸೀಟುಗಳಿವೆ ; ಯಾವ ಕಾಲೇಜುಗಳಲ್ಲಿವೆ ; ಸರ್ಕಾರಕ್ಕೆ ನೀಡಲಾದ ಸೀಟುಗಳು ಎಷ್ಟು ; ಖಾಸಗಿ ಕಾಲೇಜುಗಳಿಗೆ ನೀಡಲಾದ ಸೀಟುಗಳು ಎಷ್ಟು ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಎಷ್ಟು ವೈದ್ಯಕೀಯ ಕಾಲೇಜುಗಳಲ್ಲಿ ನರ್ಸಿಂಗ್ ಶಿಕ್ಷಣದ ಕಾಲೇಜುಗಳಿವೆ ; ಸರ್ಕಾರದಿಂದ ಎಷ್ಟು ನರ್ಸಿಂಗ್ ಕಾಲೇಜುಗಳು ನಡೆಸಲ್ಪಡುತ್ತಿವೆ ; (ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸರ್ಕಾರಿ ಮೆಡಿಕಲ್ ಕಾಲೇಜು ಪ್ರಾರಂಭಿಸುವ ಪ್ರಸ್ತಾವನೆ ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಈ) ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲಾಗಿದೆ ; ಇದರಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲಾಗುತ್ತದೆ ? (ವಿವರ ನೀಡುವುದು)

ರಾಜ್ಯ ಸರ್ಕಾರ ಮತ್ತು ಖಾಸಗಿ ವೈದ್ಯಕೀಯ ಕಾಲೇಜುಗಳ ಕುರಿತು

ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–

೧೪೪೪ (೧೯೬೮) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಮತ್ತು ಖಾಸಗಿ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು ; ಎಷ್ಟು ಎಂ.ಬಿ.ಬಿ.ಎಸ್. (M.B.B.S.) ಸೀಟುಗಳು ಇವೆ ; (ವಿವರ ನೀಡುವುದು)

(ಆ) ರಾಜ್ಯದಲ್ಲಿರುವ ಆಯುರ್ವೇದ ವೈದ್ಯಕೀಯ ಕಾಲೇಜುಗಳೆಷ್ಟು ;

(ಇ) ರಾಜ್ಯದಲ್ಲಿ ಎಷ್ಟು ಡೀಮ್ಡ್ ಯೂನಿವರ್ಸಿಟಿಗಳಿವೆ ; ಅವುಗಳಲ್ಲಿ ಇರುವ ಸೀಟುಗಳೆಷ್ಟು ; ರಾಜ್ಯ ಸರ್ಕಾರದ ಮೂಲಕ ಎಷ್ಟು ಸೀಟುಗಳನ್ನು ೨೦೧೭–೧೮, ೨೦೧೯–೨೦ ರಲ್ಲಿ ವಿದ್ಯಾರ್ಥಿಗಳಿಗೆ ನೀಡಲಾಗಿದೆ ; (ಕಾಲೇಜುವಾರು ವಿವರ ನೀಡುವುದು)

(ಈ) ಡೀಮ್ಡ್ ಯೂನಿವರ್ಸಿಟಿಗಳು ರಾಜ್ಯ ಸರ್ಕಾರಕ್ಕೆ ಸೀಟು ನೀಡದೆ ಇದ್ದ ಪ್ರಸಂಗಗಳು ರಾಜ್ಯದಲ್ಲಿ ಉಂಟಾಗಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಉ) ಖಾಸಗಿ ವಿಶ್ವವಿದ್ಯಾನಿಲಯಗಳಲ್ಲಿ ಈ ಸಮಸ್ಯೆಗಳಿದೆಯೇ ? (ವಿವರ ನೀಡುವುದು)

(B.D.S.) ಮತ್ತು (BAMS) ಕೋರ್ಸ್ ಮಾಡಿದ ವಿದ್ಯಾರ್ಥಿಗಳ ಬಗ್ಗೆ

ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–

೧೪೪೫ (೧೭೪೦) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) B.D.S. ಮತ್ತು B.A.MS. ಕೋರ್ಸು ಮಾಡಿದ ವಿದ್ಯಾರ್ಥಿಗಳು M.B.B.S. ಗೆ ಪ್ರವೇಶ ಪಡೆಯಲು ಅನುಮತಿ ನೀಡಲಾಗುತ್ತಿದೆ ಎಂಬ ನಿಯಮವೇನಾದರೂ ಇಲಾಖೆಯ ಮುಂದಿದೆಯೇ ; ಈ ಬಗ್ಗೆ ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಆ) ರಾಜ್ಯದಲ್ಲಿ B.D.S. ಸೀಟುಗಳು ಖಾಲಿ ಇದೆ ಎಂಬ ವರದಿಗಳಿರುವುದು ನಿಜವೇ ; ಕಾರಣಗಳೇನು ; ಈ ಬಗ್ಗೆ ಇಲಾಖೆ ಮುಂದಿರುವ ಕ್ರಮವೇನು ;

(ಇ) ರಾಜ್ಯದಲ್ಲಿ B.D.S. ಕಾಲೇಜುಗಳಲ್ಲಿ ಮೂಲ ಸೌಲಭ್ಯಗಳ ಕೊರತೆ ಇದೆಯೇ ; (ವಿವರ ನೀಡುವುದು)

(ಈ) ೨೦೧೮-೧೯ ಮತ್ತು ೨೦೧೯-೨೦೨೦ರಲ್ಲಿ M.B.B.S. ಕಾಲೇಜು ಮತ್ತು B.D.S. ಕಾಲೇಜುಗಳ ಸ್ಥಾಪನೆಗೆ ಇಲಾಖೆಯ ಮುಂದೆ ಎಷ್ಟು ಅರ್ಜಿಗಳು ಬಂದಿರುತ್ತವೆ ? (ವಿವರ ನೀಡುವುದು)

ಪಿಲಿಕುಳ ನಿಸರ್ಗಧಾಮದಲ್ಲಿ ಪ್ಲ್ಯಾನಿಟೋರಿಯಂ ಬಗ್ಗೆ

ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–

೧೪೪೬ (೧೭೩೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ದಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯ ಪಿಲಿಕುಳ ನಿಸರ್ಗಧಾಮದಲ್ಲಿ ಪ್ಲ್ಯಾನಿಟೋರಿಯಂಗೆ ಎಷ್ಟು ಹಣ ಮಂಜೂರು ಮಾಡಲಾಗಿದೆ ; ಈ ಬಗ್ಗೆ ಕೈಗೊಂಡಿರುವ ಪ್ರಗತಿ ಏನು ; (ವಿವರ ನೀಡುವುದು)

(ಆ) ಪಿಲಿಕುಳ ನಿಸರ್ಗಧಾಮವನ್ನು ಪ್ರಾಧಿಕಾರ ಮಾಡಬೇಕೆಂದು ಬಿಲ್‌ನ್ನು ಮಂಜೂರು ಮಾಡಲಾಗಿದ್ದು, ಈ ಬಗ್ಗೆ ನಿಯಮಗಳನ್ನು ರಚಿಸಲಾಗಿದೆಯೇ ; ಇಲ್ಲದಿದ್ದರೆ ಕಾರಣಗಳೇನು ;

(ಇ) ಪಿಲಿಕುಳ ನಿಸರ್ಗಧಾಮದಲ್ಲಿ ಪ್ರಸ್ತುತ ಇರುವ ತಿಂಗಳೊಂದಕ್ಕೆ ಆದಾಯ ಎಷ್ಟು ; ಖರ್ಚು ಎಷ್ಟು ; ಎಷ್ಟು ಮಂದಿ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ ; (ವಿವರ ನೀಡುವುದು)

(ಈ) ಪಿಲಿಕುಳ ನಿಸರ್ಗಧಾಮದಲ್ಲಿ ಕಾರ್ಯನಿರ್ವಹಿಸುತ್ತಿರುವ “ವಾಟರ್ ಪಾರ್ಕ್”ನಿಂದ ಬರುವ ಆದಾಯ ಎಷ್ಟು ; ಇದನ್ನು ಎಷ್ಟು ವರ್ಷಗಳ ಕಾಲ ಗುತ್ತಿಗೆ ನೀಡಲಾಗಿದೆ ; (ವಿವರ ನೀಡುವುದು)

(ಉ) ವಾಟರ್ ಪಾರ್ಕ್‌ನಿಂದ ಪಿಲಿಕುಳಕ್ಕೆ ಆದಾಯ ಬರುತ್ತಿಲ್ಲ ಎಂಬ ದೂರುಗಳಿದ್ದು, ಇದು ನಿಜವೇ ; ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

ರಾಜ್ಯದಲ್ಲಿ ಹೊಸದಾಗಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ತೆರೆಯುವ ಬಗ್ಗೆ

ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೧೪೪೭ (೧೬೮೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ದಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು ;

(ಆ) ಈ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಸಂಖ್ಯಾನುಪಾತದ ಪ್ರಕಾರ ವಿದ್ಯಾರ್ಥಿಗಳನ್ನು ಭರ್ತಿ ಮಾಡಲಾಗಿದೆಯೇ ; (ವಿವರ ನೀಡುವುದು)

(ಇ) ಹೊಸದಾಗಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ತೆರೆಯಲು ರಾಜ್ಯದ ವಿವಿಧ ಜಿಲ್ಲೆಗಳಿಂದ ಬಂದಿರುವ ಪ್ರಸ್ತಾವನೆಗಳು ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು, ಸ್ಥಳವಾರು ಮಾಹಿತಿ ನೀಡುವುದು)

(ಈ) ಹಾಲಿ ಇರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಗಣನೀಯವಾಗಿ ಕಡಿಮೇಯಾಗುತ್ತಿರುವ ಕಾಲೇಜುಗಳನ್ನು ಗುರುತಿಸಿ, ಅಂತಹ ಕಾಲೇಜುಗಳನ್ನು ಬೇಡಿಕೆ ಇರುವ ಸ್ಥಳಗಳಿಗೆ ಸ್ಥಳಾಂತರಿಸಲು ಸರ್ಕಾರ ಕ್ರಮ ತೆಗೆದುಕೊಂಡಿದೆಯೇ ; (ವಿವರ ನೀಡುವುದು)

(ಉ) ಹಾಗಿದ್ದಲ್ಲಿ, ಅಂತಹ ಕಾಲೇಜುಗಳ ಸಂಖ್ಯೆ ಎಷ್ಟು ;

(ಊ) ವಿವಿಧ ಜಿಲ್ಲೆಗಳಿಂದ ಹೊಸದಾಗಿ ಪ್ರಥಮ ದರ್ಜೆ ಕಾಲೇಜುಗಳನ್ನು ತೆರೆಯಲು ಬಂದಿರುವ ಪ್ರಸ್ತಾವನೆಗಳಿಗೆ ಬೇಡಿಕೆ ಇರುವ ಕಡೆ ಹೊಸದಾಗಿ ಕಾಲೇಜುಗಳನ್ನು ತೆರೆಯಲಾಗುವುದೇ ?

ಆಶಾ ಕಾರ್ಯಕರ್ತೆಯರ ಬಗ್ಗೆ ಮಾಹಿತಿ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–

೧೪೪೮ (೧೭೨೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಕಾರ್ಯನಿರತ ಆಶಾ ಕಾರ್ಯಕರ್ತರ ಒಟ್ಟು ಸಂಖ್ಯೆ ಎಷ್ಟು ;

(ಆ) ಆಶಾ ಕಾರ್ಯಕರ್ತರ ಕರ್ತವ್ಯಗಳೇನು ; (ವಿವರ ನೀಡುವುದು)

(ಇ) ಆಶಾ ಕಾರ್ಯಕರ್ತೆಯರ ಆಯ್ಕೆಯ ಮಾನದಂಡಗಳೇನು ;

(ಈ) ಇವರುಗಳಿಗೆ ನೀಡುತ್ತಿರುವ ಆರ್ಥಿಕ ಹಾಗೂ ಇತರೆ ಸವಲತ್ತುಗಳೇನು ; (ವಿವರ ನೀಡುವುದು)

(ಉ) ಸದರಿಯವರಿಗೆ ಗೌರವಧನ ಪರಿಷ್ಕರಣೆ ಮಾಡಿರುವುದು ಯಾವಾಗ ?

ಬೆಳೆ ಹಾನಿ ತಪ್ಪಿಸಲು ರೈಲ್ವೆ ಬ್ಯಾರಿಕೇಡ್ ನಿರ್ಮಾಣದ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–

೧೪೪೯ (೧೭೨೨) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅರಣ್ಯ ಇಲಾಖೆಯಲ್ಲಿ ಮಾನವ ಮತ್ತು ವನ್ಯ ಪ್ರಾಣಿ ಸಂಘರ್ಷ (ಬೆಳೆ ಹಾನಿ) ತಪ್ಪಿಸಲು ರೈಲ್ವೆ ಬ್ಯಾರಿಕೇಡ್ ಎಲ್ಲೆಲ್ಲಿ ನಿರ್ಮಿಸಲಾಗುತ್ತಿದೆ ;

(ಆ) ರಾಜೀವ್ ಗಾಂಧಿ ನ್ಯಾಷನಲ್ ಪಾರ್ಕ್ (ನಾಗರಹೊಳೆ) ಸುತ್ತಳತೆ ಎಷ್ಟು ;

(ಇ) ಇದುವರೆವಿಗೂ ಎಷ್ಟು ಕಿ.ಮೀ. ರೈಲ್ವೆ ಬ್ಯಾರಿಕೇಡ್ ನಿರ್ಮಿಸಲಾಗಿದೆ ;

(ಈ) ಇನ್ನೂ ಎಷ್ಟು ಕಿ.ಮೀ. ಪ್ರದೇಶದಲ್ಲಿ ಬ್ಯಾರಿಕೇಡ್ ನಿರ್ಮಿಸಬೇಕಾಗಿದೆ ;

(ಉ) ಯಾವ ಕಾಲಮಿತಿಯಲ್ಲಿ ನಿರ್ಮಿಸಲಾಗುವುದು ?

ಉಪನ್ಯಾಸಕರುಗಳಿಗೆ ಯು.ಜಿ.ಸಿ. ವೇತನ ಶ್ರೇಣಿಯ ಬಾಕಿ ನೀಡುವ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–

೧೪೫೦ (೧೭೨೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ದಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪದವಿ ಕಾಲೇಜು ಬಿ.ಎಡ್. ಹಾಗೂ ವಿಶ್ವವಿದ್ಯಾನಿಲಯದ ಉಪನ್ಯಾಸಕರುಗಳಿಗೆ ಯು.ಜಿ.ಸಿ. ೬ನೇ ವೇತನ ಶ್ರೇಣಿಯ ಬಾಕಿ ನೀಡಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಾದರೆ ಎಷ್ಟು ಮಂದಿ ಉಪನ್ಯಾಸಕರಿಗೆ ಎಷ್ಟು ಮೊತ್ತದ ಬಾಕಿಯನ್ನು ಪಾವತಿಸಬೇಕಾಗಿರುತ್ತದೆ ;

(ಇ) ಸದರಿ ಬಾಕಿ ಮೊತ್ತವನ್ನು ಪಾವತಿಸುವಲ್ಲಿ ವಿಳಂಬಕ್ಕೆ ಕಾರಣಗಳೇನು ;

(ಈ) ಯಾವ ಕಾಲಮಿತಿಯಲ್ಲಿ ಬಾಕಿ ಮೊತ್ತವನ್ನು ಪಾವತಿಸಲಾಗುವುದು ?

ಅನುದಾನಿತ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಸಹ ಶಿಕ್ಷಕರ ಮತ್ತು ಉಪನ್ಯಾಸಕರ ಹುದ್ದೆ ಭರ್ತಿ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–

೧೪೫೧ (೧೭೨೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ನಿವೃತ್ತಿ ಹಾಗೂ ಇನ್ನಿತರೆ ಕಾರಣಗಳಿಂದ ಖಾಲಿ ಇರುವ ಸಹ ಶಿಕ್ಷಕರ ಮತ್ತು ಉಪನ್ಯಾಸಕರ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಯಾವ ಅವಧಿಯಿಂದ ಸದರಿ ಹುದ್ದೆಗಳು ಖಾಲಿ ಇವೆ ;

(ಇ) ಸದರಿ ಹುದ್ದೆಗಳು ಖಾಲಿ ಇರುವುದರಿಂದ ವಿದ್ಯಾರ್ಥಿಗಳ ಗುಣಮಟ್ಟದ ಶಿಕ್ಷಣಕ್ಕೆ ಅಡ್ಡಿ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಸರ್ಕಾರ ಇದುವರೆಗೆ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು ;

(ಉ) ಯಾವ ಅವಧಿಯವರೆಗೆ ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು ?

ಜೆ.ಟಿ.ಓ. ಗಳಿಸಿ ೧೦ ವರ್ಷದ ಕಾಲಮಿತಿ ಬಡ್ತಿ ನೀಡಿಕೆ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–

೧೪೫೨ (೧೭೨೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಐ.ಟಿ.ಐ. ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಿರಿಯ ತರಬೇತಿ ಅಧಿಕಾರಿಗಳಿಗೆ (ಜೆ.ಟಿ.ಓ.) ನಿಗದಿತ ಸಮಯದಲ್ಲಿ ತರಬೇತಿ ನೀಡದಿರಲು ಕಾರಣಗಳೇನು ; (ವಿವರ ನೀಡುವುದು)

(ಆ) ತರಬೇತಿ ನಂತರ ಸೇವೆಯನ್ನು ಪರಿಗಣಿಸಿ, ೧೦ ವರ್ಷದ ಕಾಲಮಿತಿ ಬಡ್ತಿಯನ್ನು ನೀಡುತ್ತಿರುವುದರಿಂದ ಅವರಿಗೆ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸೇವೆಗೆ ಸೇರಿದ ದಿನದಿಂದ ಸೇವೆಯನ್ನು ಪರಿಗಣಿಸಿ ೧೦ ವರ್ಷದ ಕಾಲಮಿತಿ ಬಡ್ತಿಯನ್ನು ನೀಡಲು ಸರ್ಕಾರ ಯಾವ ಕ್ರಮ ಕೈಗೊಳ್ಳುತ್ತದೆ ;

(ಈ) ೨೦೧೦ನೇ ಸಾಲಿನಲ್ಲಿ ನೇಮಕಗೊಂಡ ಜೆ.ಟಿ.ಓ. ಗಳ ನೇಮಕಾತಿ ಸಂಬಂಧ ಇದುವರೆವಿಗೂ ಅವರ ಪರೀಕ್ಷಾ ಪೂರ್ವ ಅವಧಿ (ಪ್ರೊಬೆಷನರಿ ಪೀರಿಯಡ್) ಘೋಷಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಯಾವ ಕಾಲಮಿತಿಯಲ್ಲಿ ಸದರಿ ಪರೀಕ್ಷಾ ಪೂರ್ವ ಅವಧಿಯನ್ನು (ಪ್ರೊಬೆಷನರಿ ಪೀರಿಯಡ್) ಘೋಷಿಸಲಾಗುವುದು ?

ಬಾಗಲಕೋಟೆ ಜಿಲ್ಲೆ ಬೀಳಗಿ ತಾಲ್ಲೂಕಿನ ಚಿಕ್ಕ ಸಂಗಮದಲ್ಲಿರುವ ನಡುಗಡ್ಡೆಯ ಬಗ್ಗೆ

ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–

೧೪೫೩ (೧೬೭೪) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆಲಮಟ್ಟಿ ಹಿನ್ನೀರಿನಲ್ಲಿ ಯಾವ ಯಾವ ರಾಜ್ಯದ ಪಕ್ಷಿಗಳು ಹಾಗೂ ಯಾವ ಯಾವ ರಾಷ್ಟ್ರದ ಪಕ್ಷಿಗಳು ವಲಸೆ ಬರುತ್ತಿದೆ ;

(ಆ) ಆಲಮಟ್ಟಿ ಹಿನ್ನೀರಿನ ಪ್ರದೇಶದಲ್ಲಿ, ದೇಶದ ವಿವಿಧ ರಾಜ್ಯಗಳಿಂದ ಮತ್ತು ಜಗತ್ತಿನ ವಿವಿಧ ದೇಶಗಳಿಂದ ಬರುವ ಪಕ್ಷಿಗಳ ಸಂರಕ್ಷಣೆಗಾಗಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಕ್ರಮ ತೆಗೆದುಕೊಳ್ಳದಿದ್ದರೆ ಕಾರಣ ನೀಡುವುದು ಇವುಗಳನ್ನು ಪ್ರವಾಸಿಗರಿಗೆ ವೀಕ್ಷಿಸುವ ವ್ಯವಸ್ಥೆ ಮಾಡಲಾಗಿದೆಯೇ ; ಮಾಡಿದ್ದಲ್ಲಿ ಯಾವ ಯಾವ ಸ್ಥಳಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ ; ಆಯ್ಕೆ ಮಾಡದಿದ್ದರೆ ಕಾರಣ ನೀಡುವುದು ;

(ಇ) ಆಲಮಟ್ಟಿ ಹಿನ್ನೀರಿನಲ್ಲಿ ಸಕಲ ಜಲಚರಗಳು ಬದುಕನ್ನು ಕಾಪಾಡುವುದು ಸರ್ಕಾರದ ಕರ್ತವ್ಯವಾಗಿದ್ದು ಪ್ರತಿವರ್ಷ ಬೇಸಿಗೆಯಲ್ಲಿ ಅಣೆಕಟ್ಟಿನ ಹಿನ್ನೀರು ಬತ್ತಿಹೋಗುವ ಹಿನ್ನೆಲೆಯಲ್ಲಿ ಜಲಚರಗಳ ಜೀವ ಕಳೆದುಕೊಳ್ಳುತ್ತಿದ್ದು ಇವುಗಳಿಗಾಗಿ ಗರಿಷ್ಟ ಮಟ್ಟ ನೀರು ಸಂಗ್ರಹಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಈ) ಬಾಗಲಕೋಟೆ ಜಿಲ್ಲೆಯ ಬೀಳಗಿ ತಾಲ್ಲೂಕಿನ ಚಿಕ್ಕ ಸಂಗಮ ದೇವಸ್ಥಾನದ ಎದುರು ನಡುಗಡ್ಡೆ ಪ್ರದೇಶವನ್ನು ಪಕ್ಷಿಧಾಮ ಮಾಡುವ ಕಾಮಗಾರಿ ಯಾವ ಹಂತದಲ್ಲಿದೆ ; ಕಾಮಗಾರಿ ಕೈಗೊಳ್ಳದಿದ್ದಲ್ಲಿ ಕಾರಣವೇನು ;

(ಉ) ಆಲಮಟ್ಟಿ ಹಿನ್ನೀರಿನಿಂದ ಸುಮಾರು ನೂರಾರು ಹಳ್ಳಿಗಳಲ್ಲಿ ರಾಜ್ಯದ ಸಂಶೋಧಕರು ಮತ್ತು ಸಂಸ್ಕೃತಿ ಚಿಂತಕರು ಕೃಷಿಗೆ ಸಂಬಂಧಿಸಿದ ಸಾಮಗ್ರಿಗಳನ್ನು ಈಗಾಗಲೇ ಸಂಗ್ರಹಿಸಿ ಬಾಗಲಕೋಟೆಯ ನವನಗರದಲ್ಲಿರುವ ಜಾನಪದ ಸಂಗ್ರಹಾಲಯಕ್ಕೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಒಟ್ಟು ಎಷ್ಟು ಸಾಮಗ್ರಿಗಳನ್ನು ಸಂಗ್ರಹಿಸಿದ್ದಾರೆ ಮತ್ತು ಅವುಗಳನ್ನು ಸಂರಕ್ಷಣೆಗೆ ಸರ್ಕಾರ ಕ್ರಮ ಕೈಗೊಂಡಿದೆಯೇ ?

ಅನುದಾನಿತ ಶಾಲೆಗಳಲ್ಲಿನ ಹಾಲಿ ಮತ್ತು ಖಾಲಿ ಶಿಕ್ಷಕರ ವಿವರ

ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–

೧೪೫೪ (೧೭೫೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳಲ್ಲಿ ಹಾಲಿ ಖಾಲಿಯಿರುವ ಸಿಬ್ಬಂದಿ ವರ್ಗದವರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಆ) ಈ ಖಾಲಿ ಹುದ್ದೆ ಇರುವುದರಿಂದ ಗುಣಾತ್ಮಕ ಶಿಕ್ಷಣಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಈ) ಅನುದಾನಿತ ಶಾಲೆಗಳಲ್ಲಿ ಖಾಲಿಯಾಗುವ ಹುದ್ದೆಗಳಿಗೆ ಖಾಲಿಯಾದ ದಿನದಿಂದಲೇ ಶಿಕ್ಷಕರನ್ನು ನೇಮಿಸಿಕೊಳ್ಳಲು ಅನುಮೋದನೆ ನೀಡಲು ಸರ್ಕಾರದ ವಿಳಂಬ ಧೋರಣೆ ಏಕೆ ?

ಎಸ್.ಸಿ.ವಿ.ಟಿ. ವತಿಯಿಂದ ನಡೆಯುತ್ತಿರುವ ಐ.ಟಿ.ಐ. ಕಾಲೇಜುಗಳ ಪರೀಕ್ಷಾ ಫಲಿತಾಂಶದ ಕುರಿತು

ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–

೧೪೫೫ (೧೬೭೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಹಾಗೂ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಸ್.ಸಿ.ವಿ.ಟಿ. ವತಿಯಿಂದ ನಡೆಯುತ್ತಿರುವ ಐ.ಟಿ.ಐ.ಕಾಲೇಜುಗಳ ಸಂಖ್ಯೆ ಎಷ್ಟು ;

(ಆ) ಎಸ್.ಸಿ.ವಿ.ಟಿ. ವತಿಯಿಂದ ನಡೆಯುತ್ತಿರುವ ಐ.ಟಿ.ಐ.ಕಾಲೇಜುಗಳ ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶವನ್ನು ಕಳೆದ ೦೨ ವರ್ಷಗಳಿಂದ ಪ್ರಕಟಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಫಲಿತಾಂಶ ವಿಳಂಬವಾಗಲು ಕಾರಣಗಳೇನು ;

(ಈ) ಇನ್ನಾದರೂ, ಆದಷ್ಟೂ ಶೀಘ್ರವಾಗಿ ಪರೀಕ್ಷಾ ಫಲಿತಾಂಶಗಳನ್ನು ಪ್ರಕಟಿಸಲಾಗುವುದೇ ;

(ಉ) ಫಲಿತಾಂಶ ವಿಳಂಬವಾಗಿರುವುದರಿಂದ ವಿದ್ಯಾರ್ಥಿಗಳ ಭವಿಷ್ಯಕ್ಕೆ ತೊಂದರೆಯಾಗಿರುವುದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

ಯಶಸ್ವಿನಿ ಯೋಜನೆ ಅಸ್ಥಿತ್ವದ ಕುರಿತು

ಡಾ॥ ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–

೧೪೫೬ (೧೬೮೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಯಶಸ್ವಿನಿ ಯೋಜನೆ ಅಸ್ತಿತ್ವದಲ್ಲಿ ಇದೆಯೇ ; ಇದ್ದಲ್ಲಿ, ಇದರ ಪ್ರಯೋಜನಗಳೇನು ;

(ಆ) ಈ ಯೋಜನೆ ಅಡಿಯಲ್ಲಿ ಬರುವ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಇ) ಈ ಯೋಜನೆಗೆ ಸರ್ಕಾರವು ವಿನಿಯೋಗಿಸಿರುವ ಮೊತ್ತ ಎಷ್ಟು?

ಶಾಲೆಗಳಲ್ಲಿ ಒದಗಿಸಲಾಗಿರುವ ಶೌಚಾಲಯ ವ್ಯವಸ್ಥೆ ಕುರಿತು

ಡಾ॥ ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–

೧೪೫೭ (೧೭೫೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಶೌಚಾಲಯ ನಿರ್ಮಿಸಲಾಗಿದೆಯೇ ; (ನಿರ್ಮಿಸಲಾಗಿರುವ ಶೌಚಾಲಯಗಳ ವಿವರಗಳನ್ನು ತಾಲ್ಲೂಕುವಾರು ನೀಡುವುದು)

(ಆ) ಈ ಶೌಚಾಲಯಗಳನ್ನು ಸುಸ್ಥಿತಿಯಲ್ಲಿಡಲು ಸರ್ಕಾರವು ಕ್ರಮ ಕೈಗೊಂಡಿದೆಯೇ ;

(ಇ) ಸುಮಾರು ಶಾಲೆಗಳಲ್ಲಿ ಹೆಣ್ಣುಮಕ್ಕಳ ಶೌಚಾಲಯ ಇಲ್ಲದೇ, ಹೆಣ್ಣು ಮಕ್ಕಳ ಆರೋಗ್ಯದ ಮೇಲೆ ಗಂಭೀರವಾದ ಪರಿಣಾಮ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ಈ ಜ್ವಲಂತ ಸಮಸ್ಯೆ ನೀಗಿಸಲು ಸರ್ಕಾರ ಯೋಚಿಸಿರುವ ಯೋಜನೆಗಳು ಯಾವುವು ?

ಅತಿಥಿ ಶಿಕ್ಷಕರ ನೇಮಕಾತಿಗಿರುವ ಮಾನದಂಡ ಕುರಿತು

ಡಾ|| ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–

೧೪೫೮ (೧೭೫೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಅತಿಥಿ ಶಿಕ್ಷಕ/ ಉಪನ್ಯಾಸಕರಾಗಿ ನೇಮಿಸಿಕೊಳ್ಳಲು ಅನುಸರಿಸುತ್ತಿರುವ ಮಾನದಂಡಗಳೇನು ; ಹಾಗೂ ಅವರಿಗೆ ನೀಡುವ ಗೌರವಧನ ಎಷ್ಟು ;

(ಆ) ಇಂತಹ ಅತಿಥಿ ಶಿಕ್ಷಕರನ್ನು ಶೈಕ್ಷಣಿಕ ವರ್ಷದ ಆರಂಭದ ದಿನದಿಂದಲೇ ನೇಮಿಸಿಕೊಳ್ಳಲು ಇರುವ ತೊಂದರೆ ಏನು ;

(ಇ) ಕಳೆದ ೩ ವರ್ಷಗಳಿಂದ ಪ್ರೌಢಶಾಲೆಗಳಲ್ಲಿ ಸರ್ಕಾರ ನೇಮಿಸಿಕೊಂಡಿರುವ ಅತಿಥಿ ಶಿಕ್ಷಕರ ಸಂಖ್ಯೆ ಎಷ್ಟು ? (ವರ್ಷವಾರು ವಿವರಗಳನ್ನು ನೀಡುವುದು)

೭ನೇ ತರಗತಿಗೆ ಪಬ್ಲಿಕ್ ಪರೀಕ್ಷೆ ಕುರಿತು

ಡಾ॥ ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–

೧೪೫೯ (೧೭೫೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ೭ನೇ ತರಗತಿಗೆ ಪಬ್ಲಿಕ್ ಪರೀಕ್ಷೆ ಮಾಡಲು ಸರ್ಕಾರ ಚಿಂತಿಸಿದೆಯೇ ; ಚಿಂತಿಸಿದ್ದರೆ, ವಿವರಗಳನ್ನು ನೀಡುವುದು;

(ಆ) ೨೦೨೦–೨೧ರ ಶೈಕ್ಷಣಿಕ ವರ್ಷಕ್ಕೆ ತಿಂಗಳ ೨ ಶನಿವಾರ ೨ ದಿನ ಬ್ಯಾಗ್ ರಹಿತ ಬರಲು ಸರ್ಕಾರ ಯೋಚಿಸಿದೆಯೇ ? (ಯೋಚಿಸಿದ್ದರೆ, ಅದರ ರೂಪುರೇಷೆಗಳನ್ನು ತಿಳಿಸುವುದು)

ಬೋಧಕರಿಗೆ ಪದೋನ್ನತಿ ನೀಡಿರುವ ಕುರಿತು

ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೧೪೬೦ (೧೬೯೬) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ಖಾಯಂ ಪೂರ್ವ ಪರೀಕ್ಷೆ ಘೋಷಣೆಯಾಗದೆ, ಬೋಧಕರಿಗೆ ಪದೋನ್ನತಿ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೆಳಗಾವಿ ವೈದ್ಯಕೀಯ ಸಂಸ್ಥೆಯಲ್ಲಿ ಇಲಾಖೆಯ ಪ್ರಧಾನ ಕಾರ್ಯದರ್ಶಿ, ಮಾನ್ಯ ಸಚಿವರ ಅನುಮೋದನೆ ಇಲ್ಲದೆ, ಪದೋನ್ನತಿ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದರೆ, ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

OBC ಇಲಾಖೆಯಿಂದ ನಡೆಸಿದ ಉಚಿತ ತರಬೇತಿ ಪರೀಕ್ಷೆ ಕುರಿತು

ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೧೪೬೧ (೧೬೯೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೯ನೇ ಸಾಲಿನ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಉಚಿತ IAS/KAS/BANKING ತರಬೇತಿಯ ಪರೀಕ್ಷೆ ಬರೆದ ಸಾವಿರಾರು ಬಡ ಹಾಗೂ ಪ್ರತಿಭಾನ್ವಿತ ವಿದ್ಯಾರ್ಥಿಗಳು ಅದರ ಫಲಿತಾಂಶಕ್ಕಾಗಿ ಜಾತಕ ಪಕ್ಷಿಗಳಂತೆ ಕಾಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸಮಾಜ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗಳಿಗೆ ಒಂದೇ ದಿನದಂದು ಪರೀಕ್ಷೆ ನಡೆಸಿರುವುದು ನಿಜವಲ್ಲವೇ ;

(ಇ) ಸಮಾಜ ಕಲ್ಯಾಣ ಇಲಾಖೆಯ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಫಲಿತಾಂಶವನ್ನು ಪ್ರಕಟಿಸಿದ್ದು, ಪ್ರಸ್ತುತ ಉಚಿತ ತರಬೇತಿಯಲ್ಲಿ ನಿರತರಾಗಿದ್ದು, OBC ಅಭ್ಯರ್ಥಿಗಳ ಫಲಿತಾಂಶವನ್ನು ಮಾತ್ರ ಪ್ರಕಟಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ; ಹಾಗೂ ಈ ವಿಳಂಬ ನೀತಿಯನ್ನು ಅನುಸರಿಸಲು ಕಾರಣವೇನು ? (ವಿವರ ನೀಡುವುದು)

ಅನುಕಂಪದ ಆಧಾರದ ನೇಮಕಾತಿ

ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–

೧೪೬೨ (೧೬೮೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತಾಲಯ ಹಾಗೂ ಪದವಿ, ಪದವಿಪೂರ್ವ ಶಿಕ್ಷಣ ಇಲಾಖೆಯಲ್ಲಿ ಅನುಕಂಪದ ಆಧಾರದ ಮೇಲೆ ಉದ್ಯೋಗಕ್ಕಾಗಿ ಅರ್ಜಿ ಸಲ್ಲಿಸಿರುವವರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಅರ್ಜಿ ಸಲ್ಲಿಸಿ ವರ್ಷಗಳು ಕಳೆದರು ಅನುಕಂಪದ ಆಧಾರದ ಮೇಲೆ ಸದರಿಯವರಿಗೆ ಉದ್ಯೋಗ ನೀಡದೆ ವಿಳಂಬವಾಗಲು ಕಾರಣಗಳೇನು ;

(ಇ) ಅನುಕಂಪದ ಆಧಾರದ ಮೇಲೆ ಉದ್ಯೋಗ ನೀಡಲು ವಿನಾಕಾರಣ ಶಿಕ್ಷಣ ಇಲಾಖೆಯಲ್ಲಿ ತೊಂದರೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಇದುವರೆಗೆ ಅರ್ಜಿ ಸಲ್ಲಿಸಿರುವವರಿಗೆ ಯಾವ ಕಾಲಮಿತಿಯಲ್ಲಿ ಉದ್ಯೋಗ ನೀಡಲಾಗುವುದು ?

೨೦೧೯–೨೦ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಬಗ್ಗೆ

ಶ್ರೀ ಹೆಚ್.ಎಂ.ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–

೧೪೬೩ (೧೭೧೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೯-೨೦ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ಹೊಸದಾಗಿ ವಿದ್ಯಾರ್ಥಿ ವೇತನದ ಅರ್ಜಿಗಳನ್ನು ಆಹ್ವಾನಿಸಬಾರದು ಎಂಬುದಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯುಕ್ತರು ರಾಜ್ಯದ ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಅಧಿಕಾರಿಗಳಿಗೆ ಸುತ್ತೋಲೆ ಹೊರಡಿಸಿರುವುದು ಹಾಗೂ ಪತ್ರ ಬರೆದಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಅಂದಾಜು ಎಷ್ಟು ಹೊಸ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮಂಜೂರು ಮಾಡಲು ಸಾಧ್ಯವಾಗಿರುವುದಿಲ್ಲ ;

(ಇ) ಈ ರೀತಿ ಸುತ್ತೋಲೆ ಹೊರಡಿಸಲು ಕಾರಣಗಳೇನು ;

(ಈ) ಈ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮಂಜೂರು ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

ರಾಜ್ಯದ I.T.I. ಕಾಲೇಜುಗಳ ಶಿಕ್ಷಕರ ಕೊರತೆ ಕುರಿತು

ಶ್ರೀ ಹೆಚ್.ಎಂ.ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-

೧೪೬೪ (೧೭೩೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಹಾಗೂ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಐ.ಟಿ.ಐ. ಕಾಲೇಜುಗಳಲ್ಲಿ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಮಂಜೂರಾದ ಶಿಕ್ಷಕರ ಸಂಖ್ಯೆ, ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ ಹಾಗೂ ಕೊರತೆಯಿರುವ ಶಿಕ್ಷಕರ ಸಂಖ್ಯೆ ಎಷ್ಟು ;

(ಇ) ರಾಜ್ಯದ ಎಷ್ಟು ಐ.ಟಿ.ಐ.ಕಾಲೇಜುಗಳಿಗೆ ಪ್ರಭಾರಿ ಪ್ರಾಂಶುಪಾಲರನ್ನು ನೇಮಿಸಲಾಗಿದೆ ; ಇದರಿಂದ ಆಡಳಿತಾತ್ಮಕ ತೊಂದರೆ ಆಗುವುದಿಲ್ಲವೇ ; ಇದನ್ನು ಸರಿಪಡಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಶಿಕ್ಷಕರ ನೇಮಕಾತಿಗಾಗಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ರಾಜ್ಯದಲ್ಲಿ ವನ್ಯ ಜೀವಿಗಳ ಸಂಖ್ಯೆ ಕಡಿಮೆ ಆಗುತ್ತಿರುವ ಕುರಿತು

ಶ್ರೀ ಹೆಚ್.ಎಂ.ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–

೧೪೬೫ (೧೭೩೫) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವನ್ಯಜೀವಿಗಳ ಸಂಖ್ಯೆ ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಅಳಿವಿನ ಅಂಚಿನಲ್ಲಿರುವ ವನ್ಯಜೀವಿಗಳ ಸಂರಕ್ಷಣೆಗೆ ಸರ್ಕಾರ ಯಾವ ಯಾವ ಯೋಜನೆಗಳನ್ನು ರೂಪಿಸಿದೆ ; (ವಿವರ ನೀಡುವುದು)

(ಆ) ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿನ ವನ್ಯಜೀವಿಗಳ ಸಂರಕ್ಷಣೆಗೆ, ವಿವಿಧ ಯೋಜನೆಗಳಿಗೆ ಮಂಜೂರಾದ ಅನುದಾನವೆಷ್ಟು ; (ಯೋಜನೆವಾರು, ವಿಭಾಗವಾರು ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಮರಣ ಹೊಂದಿರುವ ವನ್ಯಜೀವಿಗಳ ಸಂಖ್ಯೆ ಎಷ್ಟು ; ಅವು ಯಾವುವು ? (ಜಿಲ್ಲಾವಾರು, ವಿಭಾಗವಾರು ವಿವರ ನೀಡುವುದು)

ತುಮಕೂರು ಜಿಲ್ಲೆಯ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಕಳೆದ ೩ ವರ್ಷಗಳಲ್ಲಿ ಸರ್ಕಾರಿ ಶಾಲೆಗಳ ಅನುಮತಿ ಕುರಿತು

ಶ್ರೀ ಹೆಚ್.ಎಂ.ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–

೧೪೬೬ (೧೮೩೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆ, ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಕಳೆದ ೩ ವರ್ಷಗಳಲ್ಲಿ ಎಷ್ಟು ಹೊಸ ಕಿರಿಯ ಪ್ರಾಥಮಿಕ ಶಾಲೆಗಳಿಗೆ ಅನುಮತಿ ನೀಡಲಾಗಿದೆ ; ಇವುಗಳಲ್ಲಿ ಎಷ್ಟು ಶಾಲೆಗಳು ಸ್ವಂತ ನಿವೇಶನ ಮತ್ತು ಕಟ್ಟಡ ಶೌಚಾಲಯ ಹೊಂದಿದೆ ; (ವಿವರ ನೀಡುವುದು)

(ಆ) ಸದರಿ ತಾಲ್ಲೂಕಿನಲ್ಲಿ ಕಳೆದ ೩ ವರ್ಷದಿಂದ ಎಷ್ಟು ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ನವೀಕರಣ ಮಾಡಲಾಗಿದೆ ; ಎಷ್ಟು ವರ್ಷಕ್ಕೆ ನವೀಕರಣ ಮಾಡಲಾಗಿದೆ ; ನವೀಕರಣ ಮಾಡಲು ಏಕ ರೀತಿಯ ಮಾನದಂಡ ಅನುಸರಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಕ್ಷೇತ್ರ ಶಿಕ್ಷಣಾಧಿಕಾರಿಗಳು ಯಾವ ಕ್ರಮ ಕೈಗೊಂಡಿರುತ್ತಾರೆ ; (ನವೀಕರಣ ಶಾಲೆಗಳ ಪೂರ್ಣ ವಿವರ ನೀಡುವುದು)

(ಇ) ಚಿಕ್ಕನಾಯಕನಹಳ್ಳಿ ಟೌನ್, ನೀರು ಬಾಗಿಲು ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿರುವ ವಿದ್ಯಾರ್ಥಿಗಳು, ಶಿಕ್ಷಕರ ಸಂಖ್ಯೆ ಎಷ್ಟು ; ಮಕ್ಕಳ ಹಾಜರಾತಿ ಹೆಚ್ಚಿಸಲು ಏನು ಕ್ರಮ ಕೈಗೊಳ್ಳಲಾಗಿದೆ ; ಈ ಶಾಲೆಗೆ ಕಳೆದ ೨ ವರ್ಷದಿಂದ B.E.O ಭೇಟಿ ನೀಡಿರುತ್ತಾರೆಯೇ ;

(ಈ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಕಳೆದ ೨ ವರ್ಷಗಳಿಂದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಅಗ್ನಿಶಾಮಕ

ನಿರೋಧಕಗಳನ್ನು ಮತ್ತು CCTV ಅಳವಡಿಸಲು ಎಷ್ಟು ಅನುದಾನ ನೀಡಲಾಗಿದೆ ; ಎಷ್ಟು ಶಾಲೆಯಲ್ಲಿ ಅಳವಡಿಸಲಾಗಿದೆ; ಇಲ್ಲದಿದ್ದಲ್ಲಿ, ಕಾರಣ ಏನು ; (ವಿವರ ನೀಡುವುದು)

(ಉ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಎಷ್ಟು ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಅಳವಡಿಸಲಾಗಿದೆ ; ಇದಕ್ಕೆ ಕಳೆದ ೩ ವರ್ಷಗಳಲ್ಲಿ ಬಿಡುಗಡೆಯಾದ ಹಣವೆಷ್ಟು ? (ವಿವರ ನೀಡುವುದು)

ಬೆಂಗಳೂರು ನಗರ ಜಿಲ್ಲೆಯ ಯಲಹಂಕ ತಾಲ್ಲೂಕಿನ ಸರ್ಕಾರಿ ಶಾಲೆಗಳ ಆಸ್ತಿ ಕುರಿತು

ಶ್ರೀ ಹೆಚ್.ಎಂ.ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–

೧೪೬೭ (೧೭೩೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲೆಯ ಯಲಹಂಕ ತಾಲ್ಲೂಕಿನಲ್ಲಿ ಇರುವ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಹೆಸರಿನಲ್ಲಿ ಎಷ್ಟು ಆಸ್ತಿ ಇರುತ್ತದೆ; ಇವುಗಳನ್ನು ಶಾಲೆ ಹೆಸರಿನಲ್ಲಿ ನೋಂದಾಯಿಸಿದೆಯೇ ; ಇಲ್ಲದೆ ಇದ್ದರೆ, ಕಾರಣವೇನು ; (ಪ್ರತ್ಯೇಕವಾಗಿ ಶಾಲೆಗಳ ವಿವರ ನೀಡುವುದು)

(ಆ) ಕಳೆದ ೩ ಆರ್ಥಿಕ ವರ್ಷದಲ್ಲಿ ಯಲಹಂಕ ಕ್ಷೇತ್ರ ಶಿಕ್ಷಣಾಧಿಕಾರಿ ಕಾರ್ಯಾಲಯದಲ್ಲಿ ಲೆಕ್ಕ ಪತ್ರಗಳಿಗೆ ಸಂಬಂಧಿಸಿದಂತೆ ಆಡಿಟ್ ಆಗಿದೆಯೇ ; ಆಗಿದ್ದಲ್ಲಿ, ಆಕ್ಷೇಪಣೆಗಳು ಇದೆಯೇ ; ಇದ್ದರೆ, ಅದರ ಮೇಲೆ ಏನು ಕ್ರಮ ಆಗಿದೆ ; (ಆಡಿಟ್ ವರದಿ ಪ್ರತಿ ನೀಡುವುದು)

(ಇ) ಯಲಹಂಕ ಕ್ಷೇತ್ರ ಶಿಕ್ಷಣಾಧಿಕಾರಿ ಕಾರ್ಯಾಲಯದಲ್ಲಿರುವ ಶಿಕ್ಷಕೇತರ ಸಿಬ್ಬಂದಿ ಎಷ್ಟು ; ಇವರು ಎಷ್ಟು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದಾರೆ ; (ವಿವರ ನೀಡುವುದು)

(ಈ) ಕಳೆದ ೩ ವರ್ಷ ಅವಧಿಯಲ್ಲಿ ಯಲಹಂಕ ತಾಲ್ಲೂಕಿನಲ್ಲಿ ೧ ರಿಂದ ೧೦ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಸರ್ಕಾರಿ ಶಾಲೆಗಳ ಮಕ್ಕಳ ಸಂಖ್ಯೆ ಎಷ್ಟು ; ಇವರಿಗೆ ಎಷ್ಟು ಶೂ ಮತ್ತು ಸಾಕ್ಸ್ ನೀಡಲಾಗಿದೆ ; (ವಿವರ ನೀಡುವುದು)

(ಉ) ಕಳೆದ ೩ ವರ್ಷಗಳಲ್ಲಿ ಯಲಹಂಕ B.E.O ಎಷ್ಟು ಸರ್ಕಾರಿ ಶಾಲೆಗಳಿಗೆ ಭೇಟಿ ನೀಡಿರುತ್ತಾರೆ ? (ವಿವರ ನೀಡುವುದು)

ರಾಜ್ಯದಲ್ಲಿನ ಅಸಂಘಟಿತ ಕಾರ್ಮಿಕರ ಬಗ್ಗೆ

ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) :–

೧೪೬೮ (೧೭೫೯) ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಸಂಘಟಿತ ಕಾರ್ಮಿಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು/ ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಇವರನ್ನು ರಾಜ್ಯ ಸರ್ಕಾರ ಯಾವ ರೀತಿಯಲ್ಲಿ ವರ್ಗೀಕರಿಸಿದೆ;

(ಇ) ಸದರಿಯವರಿಗೆ ಸರ್ಕಾರದಿಂದ ಯಾವ ಯಾವ ಕಾರ್ಯಕ್ರಮಗಳನ್ನು ಹಾಗೂ ಸೌಲಭ್ಯಗಳನ್ನು ಹಮ್ಮಿಕೊಂಡಿದೆ;

(ಈ) ಕಳೆದ ೨ ವರ್ಷಗಳಲ್ಲಿ ಅನುಷ್ಠಾನಗೊಳಿಸಿದ ಮಾಹಿತಿ ನೀಡುವುದು; ಹಾಗೂ ಪ್ರಸಕ್ತ ಸಾಲಿನಲ್ಲಿ ಅನುಷ್ಠಾನಗೊಳಿಸಲಿರುವ ಯೋಜನೆಗಳ ಬಗ್ಗೆ ವಿವರ ನೀಡುವುದು ?

ವಿಶ್ವ ವಿದ್ಯಾಲಯಗಳಲ್ಲಿ ಹಳೆ ಪಿಂಚಣಿ ಯೋಜನೆ ಮುಂದುವರೆಸುವ ಕುರಿತು

ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–

೧೪೬೯ (೧೭೩೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳಲ್ಲಿ ೨೦೦೬ರ ಪೂರ್ವದಲ್ಲಿ ಉಪನ್ಯಾಸಕರಾಗಿ/ಅಸಿಸ್ಟೆಂಟ್ ಪ್ರೊಫೆಸರ್ ಆಗಿ ನೇಮಕಗೊಂಡು ತದನಂತರ ಅಸೋಸಿಯೆಟ್ ಪ್ರೊಫೆಸರ್ ಹಾಗೂ ಪ್ರೊಫೆಸರಾಗಿ ಪದೋನ್ನತಿ ಹೊಂದಿದವರಿಗೆ ಹಳೆ ಪಿಂಚಣಿ ಯೋಜನೆಯನ್ನು ಮುಂದುವರೆಸಲಾಗಿದೆಯೇ ; (ವಿವರ ನೀಡುವುದು)

(ಆ) ೨೦೦೬ರ ಪೂರ್ವದಲ್ಲಿ ಪದವಿ ಕಾಲೇಜುಗಳಲ್ಲಿ ಉಪನ್ಯಾಸಕರಾಗಿ/ಅಸಿಸ್ಟೆಂಟ್ ಪ್ರೊಫೆಸರ್ ಆಗಿ ನೇಮಕಗೊಂಡು ತದನಂತರ ವಿಶ್ವವಿದ್ಯಾಲಯಗಳಲ್ಲಿ ಅಸೋಸಿಯೆಟ್ ಹಾಗೂ ಪ್ರೊಫೆಸರ್ ಆಗಿ ನೇಮಕ ಹೊಂದಿದವರಿಗೆ ಹಳೆ ಪಿಂಚಣಿ ಯೋಜನೆಯನ್ನು ಮುಂದುವರೆಸಲಾಗಿದೆಯೇ ; (ಮಾಹಿತಿ ನೀಡುವುದು)

(ಇ) ಮೇಲೆ ತಿಳಿಸಿದ ವಿಷಯಗಳಿಗೆ ಸಂಬಂಧಿಸಿದಂತೆ ೨೦೦೬ರ ನಂತರ ಪದೋನ್ನತಿ ಹೊಂದಿ ಅಸೋಸಿಯೆಟ್ ಪ್ರೊಫೆಸರ್ ಹಾಗೂ ಪ್ರೊಫೆಸರ್ ಆಗಿ ಪದೋನ್ನತಿ/ನೇಮಕಾತಿ ಹೊಂದಿ ನಿವೃತ್ತಿಯಾದ ಸಿಬ್ಬಂದಿಗೆ ೨–೩ ವರ್ಷ ಕಳೆದರೂ ಯಾವ ಪಿಂಚಣಿ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಮತ್ತು ಈ ಸಮಸ್ಯೆಗೆ ಸರ್ಕಾರ ಯಾವ ಪರಿಹಾರವನ್ನು ಸೂಚಿಸಿದೆ ? (ಸಂಪೂರ್ಣ ವಿವರ ನೀಡುವುದು)

ಪದವಿ ಪೂರ್ವ ಶಿಕ್ಷಣ ಉಪನ್ಯಾಸಕರು ಬಿ.ಎಡ್ ಪದವಿ ಹೊಂದುವವರ ಕುರಿತು

ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–

೧೪೭೦ (೧೭೬೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ಬಿ.ಎಡ್ ಪದವಿ ಹೊಂದಿರದ ಶಿಕ್ಷಕರ ಸಂಖ್ಯೆ ಎಷ್ಟು ; ಉಪನ್ಯಾಸಕರಾಗಲು ಬಿ.ಎಡ್, ಪದವಿ ಕಡ್ಡಾಯವಾಗಿದೆಯೇ ;

(ಆ) ವಿಶೇಷ ವಿಲೀನ ನಿಯಮಗಳ ಪ್ರಕಾರ ಕೇವಲ ಸ್ನಾತಕೋತ್ತರ ಪದವಿ ಹೊಂದಿದವರನ್ನು ಉಪನ್ಯಾಸಕರನ್ನಾಗಿ ನೇಮಿಸುವುದರಿಂದ ಉಪನ್ಯಾಸಕ ಹುದ್ದೆಗೆ ಅನರ್ಹರನ್ನು ನೇಮಿಸಿದಂತಾಗಿಲ್ಲವೇ ; ಇಲ್ಲವೆಂದಾದಲ್ಲಿ ಉಪನ್ಯಾಸಕ ಹುದ್ದೆಗೆ ಬಿ.ಎಡ್. ಪದವಿ ಕಡ್ಡಾಯ ಎಂಬುದನ್ನು ತೆರವುಗೊಳಿಸುವ ಪ್ರಸ್ತಾವ ಸರ್ಕಾರದ ಮುಂದಿದೆಯೇ;

(ಇ) ವಿಶೇಷ ವಿಲೀನ ನಿಯಮಗಳ ಪ್ರಕಾರ ಕೇವಲ ಸ್ನಾತಕೋತ್ತರ ಪದವಿ ಹೊಂದಿದವರನ್ನು ನೇಮಿಸಿದ್ದು ಅವರಿಗೆ ಬಿ.ಎಡ್ ಪದವಿ ಹೊಂದಲು ಅಸಾಧ್ಯವೆಂದಾದಲ್ಲಿ ಅಂತಹ ವಿಲೀನಗೊಂಡ ಉಪನ್ಯಾಸಕರನ್ನು ಇತರ ಇಲಾಖೆಗಳಲ್ಲಿ ಅರ್ಹ ಹುದ್ದೆಗೆ ವಿಲೀನಗೊಳಿಸುವ ಬಗ್ಗೆ ಸರ್ಕಾರದ ನಿಲುವೇನು ;

(ಈ) ಅನರ್ಹ ಉಪನ್ಯಾಸಕರು ಈಗಾಗಲೆ ವಿಲೀನಗೊಂಡಿರುತ್ತಾರೆ ಎಂಬ ಒಂದೇ ಕಾರಣಕ್ಕೆ ಬಿ.ಎಡ್ ಪದವಿ ಹೊಂದಲು ವಿನಾಯಿತಿ ನೀಡಿದಲ್ಲಿ ಸರ್ಕಾರಿ ಶಾಲೆಗಳ ಶಿಕ್ಷಣ ಗುಣಮಟ್ಟದ ಮೇಲೆ ಪರಿಣಾಮ ಬೀರುವುದಿಲ್ಲವೇ ; ಇದರಿಂದ ವಿದ್ಯಾಭ್ಯಾಸದ ಮೇಲೆ ಆಗುವ ಗುಣಮಟ್ಟದ ಕುಸಿತಕ್ಕೆ ಹೊಣೆಗಾರರು ಯಾರು ;

(ಉ) ಕೆಲವೇ ಕೆಲವು ಉಪನ್ಯಾಸಕರ ಹಿತಾಸಕ್ತಿ ಕಾಯಲು ಸರ್ಕಾರಿ ಕಾಲೇಜುಗಳ ವಿದ್ಯಾರ್ಥಿಗಳ ಭವಿಷ್ಯದ ಕುರಿತು ಸರ್ಕಾರ ತೆಗೆದುಕೊಂಡ ಕ್ರಮವೇನು ?

ಶಿಕ್ಷಕರು ಮತ್ತು ಉಪನ್ಯಾಸಕರಿಗೆ ವಿಶೇಷ ಭತ್ಯೆ ಮಂಜೂರು ಮಾಡುವ ಬಗ್ಗೆ

ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ) ಮತ್ತು ಶ್ರೀ ಎಸ್.ವ್ಹಿ.ಸಂಕನೂರ (ಪದವೀಧರರ ಕ್ಷೇತ್ರ) :–

೧೪೭೧ (೧೭೪೧ + ೧೭೨೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೦೧.೦೮.೨೦೦೮ ಮುಂಚೆ ಅಂದರೆ ಜುಲೈ ತಿಂಗಳಲ್ಲಿ ನೇಮಕಾತಿಯಾಗಿ ಅದೇ ತಿಂಗಳಲ್ಲಿ ಸೇವೆಯಲ್ಲಿ ಸೇರಿದವರಿಗೆ ವಿಶೇಷ ಭತ್ಯೆ ನೀಡಲಾಗಿದೆ. ಆದರೆ ಸದರಿ ಪಟ್ಟಿಯಲ್ಲಿದ್ದು, ೧.೮.೨೦೦೮ರ ನಂತರ ಕರ್ತವ್ಯಕ್ಕೆ ಹಾಜರಾದವರಿಗೆ ವಿಶೇಷ ಭತ್ಯೆ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಯಾವ ಕಾಲಮಿತಿಯೊಳಗೆ ವಿಶೇಷ ಭತ್ಯೆ ಮಂಜೂರು ಮಾಡಲಾಗುವುದು ; (ವಿವರ ನೀಡುವುದು)

(ಇ) ೨೦೦೮ರ ನಂತರ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಸಹ ಶಿಕ್ಷಕರಾಗಿ/ಉಪನ್ಯಾಸಕರಾಗಿ ನೇಮಕಗೊಂಡ

ಸಿಬ್ಬಂದಿಗೆ ಕುಮಾರ ನಾಯಕ್ ವರದಿ ಪ್ರಕಾರ ಒಂದು ಹೆಚ್ಚುವರಿ ಇನ್‌ಕ್ರಿಮೆಂಟ್ ನೀಡಲಾಗಿದೆಯೇ ; (ಮಾಹಿತಿ ನೀಡುವುದು)

(ಈ) ೨೦೦೮ರ ನಂತರ ನೇಮಕಗೊಂಡ ಸಹ–ಶಿಕ್ಷಕರು ಹಾಗೂ ಉಪನ್ಯಾಸಕರಿಗೂ ಕೂಡಾ ಇತ್ತೀಚೆಗೆ ಒಂದು ಹೆಚ್ಚುವರಿ ಇನ್‌ಕ್ರಿಮೆಂಟ್ ನೀಡಬೇಕೆಂದು ನ್ಯಾಯಾಲಯವು ತೀರ್ಪು ನೀಡಿರುವುದೆಂಬ ಸಂಗತಿ ನಿಜವೇ ; ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಏನು ಕ್ರಮ ಕೈಗೊಂಡಿದೆ ? (ಮಾಹಿತಿ ನೀಡುವುದು)

ಕಲ್ಯಾಣ ಕರ್ನಾಟಕ ಅಡಿಯಲ್ಲಿ ಬರುವ ಶಾಲಾ ಶಿಕ್ಷಕರಿಗೆ ವೇತನ ನೀಡುವ ಬಗ್ಗೆ

ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ) :–

೧೪೭೨ (೧೬೬೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯ರಲ್ಲಿ ಹೊಸ ವರ್ಗಾವಣೆ ನಿಯಮದ ಪ್ರಕಾರ ಕೌನ್ಸಲಿಂಗ್ ನಲ್ಲಿ ಸ್ಥಳವನ್ನು ತೋರಿಸಿದಾಗ ಶಿಕ್ಷಕರು ಸದರಿ ಸ್ಥಳಕ್ಕೆ ವರ್ಗಾವಣೆ ಯನ್ನು ಪಡೆದುಕೊಂಡಿದ್ದು ಕಲ್ಯಾಣ ಕರ್ನಾಟಕ ಅಡಿಯಲ್ಲಿ ಬರುವ ಶಾಲೆಗಳಲ್ಲಿ ಸ್ಥಳವನ್ನು ತೆಗೆದುಕೊಂಡ ಶಿಕ್ಷಕರುಗಳಿಗೆ ೬ ತಿಂಗಳಿನಿಂದ ವೇತನ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಕಾರಣಗಳನ್ನು ನೀಡುವುದು ;

(ಆ) ಅಂತಹ ಶಾಲೆಗಳಿಗೆ ವರ್ಗಾವಣೆಗೊಂಡ ಶಿಕ್ಷಕರಿಗೆ ಯಾವ ಕಾಲಮಿತಿಯೊಳಗೆ ವೇತನವನ್ನು ನೀಡಲಾಗುವುದು ?

ಪ್ರೌಢಶಾಲಾ ಶಿಕ್ಷಕರಿಗೆ ವೇತನ ನೀಡದಿರುವ ಬಗ್ಗೆ

ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ) :–

೧೪೭೩ (೧೬೬೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವರ್ಗಾವಣೆ ಮಾರ್ಗಸೂಚಿ ಪ್ರಕಾರ ೨೦೧೯ರಲ್ಲಿ ಕಡ್ಡಾಯ ಮತ್ತು ಹೆಚ್ಚುವರಿ ತೋರಿಸಿ ವರ್ಗಾವಣೆ ಮಾಡಿದ ಪ್ರೌಢಶಾಲಾ ಶಿಕ್ಷಕರಿಗೆ ೮ ತಿಂಗಳಿಂದ ವೇತನ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ ವೇತನ ವಿಳಂಬಕ್ಕೆ ಕಾರಣವನ್ನು ನೀಡುವುದು ;

(ಆ) ಸದರಿ ಪ್ರೌಢಶಾಲಾ ಶಿಕ್ಷಕರಿಗೆ ಯಾವ ಕಾಲಮಿತಿಯೊಳಗೆ ವೇತನವನ್ನು ನೀಡಲಾಗುವುದು ?

ಲ್ಯಾಪ್‌ಟಾಪ್ ಖರೀದಿಯಲ್ಲಿನ ಅವ್ಯವಹಾರದ ಕುರಿತು

ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ) :–

೧೪೭೪ (೧೬೭೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಹಾಗೂ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪದವಿ ವಿದ್ಯಾರ್ಥಿಗಳಿಗೆ ಸರ್ಕಾರದ ವತಿಯಿಂದ ಉಚಿತವಾಗಿ ಲ್ಯಾಪ್‌ಟಾಪ್‌ಗಳನ್ನು ವಿತರಿಸಿರುವುದು ನಿಜವೇ ; ಇದ್ದಲ್ಲಿ, ಯಾವ್ಯಾವ ವರ್ಷದ ಎಷ್ಟು ವಿದ್ಯಾರ್ಥಿಗಳಿಗೆ ನೀಡಲಾಗಿದೆ ; ವಿತರಿಸುವಾಗ ನಿಗದಿಪಡಿಸಿರುವ ಮಾನದಂಡಗಳೇನು ; ಯಾವ್ಯಾವ ಕಾಲೇಜುಗಳಲ್ಲಿ ಎಷ್ಟೆಷ್ಟು

ವಿದ್ಯಾರ್ಥಿಗಳಿಗೆ ವಿತರಿಸಲಾಗಿದೆ ; (ಕಾಲೇಜು ಮತ್ತು ವಿಭಾಗವಾರು ಮಾಹಿತಿ ನೀಡುವುದು)

(ಆ) ಪ್ರತಿ ಲ್ಯಾಪ್‌ಟಾಪ್‌ಗೆ ನಿಗದಿಪಡಿಸಿರುವ ಬೆಲೆ ಎಷ್ಟು; ಖರೀದಿಸುವಲ್ಲಿ ಕಾನೂನಿನನ್ವಯ ಪಾರದರ್ಶಕವಾದ ಟೆಂಡರ್ ಕರೆಯಲಾಗಿದೆಯೇ; ಟೆಂಡರ್‌ನಲ್ಲಿ ಲ್ಯಾಪ್‌ಟಾಪ್‌ಗೆ ನಿಗದಿಪಡಿಸಿದ್ದ ಸಂರಚನೆ (configuration) ಏನು ; (ಪ್ರತಿ ಒದಗಿಸುವುದು)

(ಇ) ಟೆಂಡರ್ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದ ಒಟ್ಟು ಸಂಸ್ಥೆಗಳೆಷ್ಟು; ಪ್ರತಿ ಸಂಸ್ಥೆಗಳು ಕೋಟ್ ಮಾಡಿದ್ದ ಬೆಲೆ ವಿವರ ತಿಳಿಸುವುದು ;

(ಈ) ವಿದ್ಯಾರ್ಥಿಗಳಿಗೆ ಕನಿಷ್ಟ ಸಂರಚನೆ (configuration) ಹೊಂದಿರುವ ಲ್ಯಾಪ್‌ಟಾಪ್‌ಗಳನ್ನು ವಿತರಿಸಿರುವುದರಿಂದ ಕನಿಷ್ಟ ಟ್ಯಾಲಿ ಮತ್ತು ಪ್ರಾಜೆಕ್ಟ್ ಕೆಲಸಗಳಿಗೆ ಬಳಸಲಾಗದ ಪರಿಸ್ಥಿತಿ ನಿರ್ಮಾಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದ್ದಲ್ಲಿ, ಇದನ್ನು ಸರಿಪಡಿಸಲು ಕೈಗೊಳ್ಳುವ ಕ್ರಮಗಳೇನು ;

(ಉ) ಪ್ರಸ್ತುತ ಖರೀದಿಸಿರುವ ಲ್ಯಾಪ್‌ಟಾಪ್‌ಗಳು ಆನ್‌ಲೈನ್ ಮಾರುಕಟ್ಟೆಯಲ್ಲಿ ಕೇವಲ ರೂ.೨೦ ಸಾವಿರಗಳಿಗೆ ದೊರೆಯುತ್ತಿರುವುದು ನಿಜವೆ ; ಇದ್ದಲ್ಲಿ ಸರ್ಕಾರದ ವತಿಯಿಂದ ಇದಕ್ಕಿಂತ ಹೆಚ್ಚಿನ ಮೊತ್ತವನ್ನು ನೀಡಿ ಖರೀದಿಸಲಾಗಿದೆಯೇ ; ಇದ್ದಲ್ಲಿ ಕಾರಣಗಳೇನು ;

(ಊ) ಲ್ಯಾಪ್‌ಟಾಪ್‌ಗಳಿಗೆ ಹೆಚ್ಚಿನ ಮೊತ್ತದ ದರ ನೀಡಿ ಖರೀದಿಸಿರುವ ಬಗ್ಗೆ ಪತ್ರಿಕೆಗಳಲ್ಲಿ ವರದಿಯಾಗಿರುವುದು ನಿಜವೆ ; ಇದ್ದಲ್ಲಿ ಈ ಅವ್ಯವಹಾರದ ಬಗ್ಗೆ ಸರ್ಕಾರವು ತನಿಖೆ ನಡೆಸಿ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

ರಾಜ್ಯದಲ್ಲಿ ಅಂತರ್ಜಲ ರಕ್ಷಿಸುವ ಬಗ್ಗೆ

ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ) :–

೧೪೭೫ (೧೬೬೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಂತರ್ಜಲ ಸಂರಕ್ಷಣೆ ದೃಷ್ಟಿಯಿಂದ ಯಾವ್ಯಾವ ಮರಗಳನ್ನು ಬೆಳೆಯಬಾರದೆಂದು ಸರ್ಕಾರ ಕಾಯ್ದೆ ಅಥವಾ ಷರತ್ತು ವಿಧಿಸಿದೆ ; (ಪ್ರತಿ ನೀಡುವುದು)

(ಆ) ಈಗಾಗಲೇ ಬೆಳೆದಿರುವ ಇಂತಹ ಮರಗಳನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲ್ಲೂಕು, ಸೋಂಪುರ ಹೋಬಳಿ ವ್ಯಾಪ್ತಿಯ ಗ್ರಾಮಗಳಲ್ಲಿ ಎಷ್ಟು ಎಕರೆ ವಿಸ್ತೀರ್ಣದಲ್ಲಿ ಇಂತಹ ಮರಗಳನ್ನು ಬೆಳೆಯಲಾಗಿದೆ ; ಗ್ರಾಮ ಮತ್ತು ವಿಸ್ತೀರ್ಣವಾರು ವಿವರ ನೀಡುವುದು ;

(ಈ) ಸೋಂಪುರ ಹೋಬಳಿಯ ಕಾಸರಘಟ್ಟ ಗ್ರಾಮ ವ್ಯಾಪ್ತಿಯ ಎಷ್ಟು ಎಕರೆ ವಿಸ್ತೀರ್ಣದಲ್ಲಿ ಇಂತಹ ಮರಗಳನ್ನು ಬೆಳೆಯಲಾಗಿದೆ ; (ಹೆಸರು ಮತ್ತು ವಿಸ್ತೀರ್ಣವಾರು ವಿವರ ನೀಡುವುದು)

(ಉ) ಸದರಿ ಗ್ರಾಮ ವ್ಯಾಪ್ತಿಯಲ್ಲಿ ಇಂತಹ ಮರಗಳನ್ನು ತೆರವುಗೊಳಿಸಲು ಈವರೆಗೂ ಕೈಗೊಂಡಿರುವ ಕ್ರಮ ವಿವರ ಮತ್ತು ಯಾವ ನಿಗದಿತ ದಿನಾಂಕದೊಳಗೆ ಮರಗಳನ್ನು ತೆರವುಗೊಳಿಸಲಾಗುವುದು ?

ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಿಂದ ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳ ಬಗ್ಗೆ

ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–

೧೪೭೬ (೧೭೬೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಿಂದ ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳು ಎಷ್ಟು ;

(ಆ) ಈ ಕಾಲೇಜುಗಳಲ್ಲಿ ಖಾಯಂ ಹುದ್ದೆಗಳನ್ನು ಮಂಜೂರು ಮಾಡಲಾಗಿದೆಯೇ ;

(ಇ) ಖಾಯಂ ಉಪನ್ಯಾಸಕರು ಮತ್ತು ಪ್ರಾಂಶುಪಾಲರುಗಳು ಇದ್ದಾರೆಯೇ ;

(ಈ) ಇದ್ದಲ್ಲಿ, ಕಾಲೇಜುವಾರು ವಿವರಗಳನ್ನು ನೀಡುವುದು ;

(ಉ) ಕನಿಷ್ಠ ಹತ್ತು ವರ್ಷಗಳ ಕಾಲ ತಾತ್ಕಾಲಿಕವಾಗಿ ಸೇವೆ ಪೂರೈಸಿರುವ ಉಪನ್ಯಾಸಕರುಗಳನ್ನು ಖಾಯಂ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಊ) ಇದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

ಸಾರ್ವಜನಿಕ ಗ್ರಂಥಾಲಯ ಇಲಾಖೆ ಬಗ್ಗೆ

ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–

೧೪೭೭ (೧೭೬೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿ ಮಂಜೂರಾಗಿರುವ ಮುಖ್ಯ ಗ್ರಂಥಾಲಯಾಧಿಕಾರಿಗಳ ಹುದ್ದೆಗಳೆಷ್ಟು ;

(ಆ) ಇದರಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ; ಇದರಲ್ಲಿ ನೇರ ನೇಮಕಾತಿ ಕೋಟಾ ಮತ್ತು ಬಡ್ತಿ ಕೋಟಾದ ಹುದ್ದೆಗಳೆಷ್ಟು ; (ವಿವರ ನೀಡುವುದು)

(ಇ) ಈ ಹುದ್ದೆಗಳು ಎಷ್ಟು ಅವಧಿಯಿಂದ ಖಾಲಿ ಇವೆ ;

(ಈ) ಖಾಲಿಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ; ವಿಶೇಷವಾಗಿ ಬಡ್ತಿ ಕೋಟಾದ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಉ) ಈ ಹುದ್ದೆಗಳನ್ನು ಭರ್ತಿ ಮಾಡುವುದು ಯಾವಾಗ ? (ವಿವರ ನೀಡುವುದು)

ಖಾಸಗಿ ಮೆಡಿಕಲ್ ಕಾಲೇಜುಗಳಲ್ಲಿ ಅಭ್ಯಸಿಸಿ, ಇಂಟರ್ನ್‌ಶಿಪ್ ಮಾಡುತ್ತಿರುವ ವೈದ್ಯಕೀಯ ವಿದ್ಯಾರ್ಥಿಗಳಿಗೆ ಸ್ಟೈಫಂಡ್ ನೀಡದಿರುವ ಬಗ್ಗೆ

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–

೧೪೭೮ (೧೭೫೨) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಖಾಸಗಿ ಮೆಡಿಕಲ್ ಕಾಲೇಜುಗಳಲ್ಲಿ ಅಭ್ಯಸಿಸಿ, ಇಂಟರ್ನ್‌ಶಿಪ್ ಮಾಡುತ್ತಿರುವ ವೈದ್ಯಕೀಯ ವಿದ್ಯಾರ್ಥಿಗಳಿಗೆ ಸ್ಟೈಫಂಡ್ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ರಾಜ್ಯದಲ್ಲಿ ಸ್ಟೈಫಂಡ್ ನೀಡದೇ ಇರುವ ಖಾಸಗಿ ವೈದ್ಯಕೀಯ ಕಾಲೇಜುಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಆ) ಸ್ಟೈಫಂಡ್‌ನ್ನು ವೈದ್ಯಕೀಯ ವಿದ್ಯಾರ್ಥಿಗಳಿಗೆ ಎಂಸಿಐ ನಿಯಮಗಳ ಪ್ರಕಾರ, ಖಾಸಗಿ ಕಾಲೇಜುಗಳು ನೀಡಬೇಕಾಗಿರುವುದು ನ್ಯಾಯಬದ್ಧವಲ್ಲವೇ ; ಹಾಗಿದ್ದಲ್ಲಿ, ರಾಜ್ಯ ಸರ್ಕಾರ ರೂಪಿಸಿರುವ ನಿಯಮಾವಳಿಗಳು ಯಾವುವು ; (ಪೂರ್ಣ ವಿವರ ನೀಡುವುದು)

(ಇ) ರಾಜ್ಯದಲ್ಲಿ ಕೆಲವೊಂದು ವೈದ್ಯಕೀಯ ಕಾಲೇಜುಗಳು ಮುಂಗಡವಾಗಿ ವೈದ್ಯಕೀಯ ವಿದ್ಯಾರ್ಥಿಗಳಿಂದ ವಸೂಲಿ ಮಾಡಿಕೊಂಡು, ತದನಂತರ ಅವರುಗಳಿಗೆ ಪಾವತಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಇಂತಹ ವೈದ್ಯಕೀಯ ಕಾಲೇಜುಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ?

ಕೌಶಲ್ಯಾಭಿವೃದ್ಧಿ ಯೋಜನೆಯಡಿ ವಿವಿಧ ಯೋಜನೆಗಳು

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–

೧೪೭೯ (೧೭೫೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೌಶಲ್ಯಾಭಿವೃದ್ಧಿಗೆ ಸಂಬಂಧಿಸಿದಂತೆ ಸರ್ಕಾರ ಹಮ್ಮಿಕೊಂಡಿರುವ ಯೋಜನೆಗಳು ಯಾವುವು ; ಈ ಯೋಜನೆಗಳಿಂದ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಆಗಿರುವ ಪ್ರಯೋಜನೆಗಳು ಯಾವುವು ; (ಸಂಖ್ಯೆವಾರು, ಫಲಾನುಭವಿವಾರು ಮತ್ತು ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕೌಶಲ್ಯ ಅಭಿವೃದ್ಧಿಪಡಿಸಲು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ; ಈ ಸಂಬಂಧ ಎಷ್ಟು ತರಬೇತಿ ಕಾರ್ಯಾಗಾರಗಳನ್ನು ಸ್ಥಾಪಿಸಲಾಗಿದೆ ; ಅವು ಯಾವುವು ಮತ್ತು ಅವು ಎಲ್ಲೆಲ್ಲಿವೆ ;

(ಇ) ಇದುವರೆಗೆ ಸರ್ಕಾರ ಎಷ್ಟು ಉದ್ಯೋಗ ಮೇಳಗಳನ್ನು ಆಯೋಜಿಸಿದೆ ; ಇಂತಹ ಮೇಳಗಳಿಂದ ಗ್ರಾಮೀಣ ಪ್ರದೇಶದ ಎಷ್ಟು ಅಭ್ಯರ್ಥಿಗಳಿಗೆ ಉದ್ಯೋಗ ಲಭಿಸಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಯುವ ಜನರಲ್ಲಿ ಕೌಶಲ್ಯವನ್ನು ಹೆಚ್ಚಿಸುವ ಸಲುವಾಗಿ ಆಧುನಿಕ ಹಾಗೂ ಜಾಗತಿಕ ವ್ಯವಹಾರಗಳಲ್ಲಿ ಯುವ ಪ್ರತಿಭೆಯನ್ನು ಆಕರ್ಷಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಉ) ಕಳೆದ ಮೂರು ವರ್ಷಗಳಲ್ಲಿ ಕೌಶಲ್ಯಾಭಿವೃದ್ಧಿಯಡಿ ವಿವಿಧ ಯೋಜನೆಗಳಿಗೆ ಮೀಸಲಿಟ್ಟ ಅನುದಾನ ಹಾಗೂ ಬಿಡುಗಡೆ ಮಾಡಲಾದ ಅನುದಾನವೆಷ್ಟು ? (ಪೂರ್ಣ ವಿವರ ನೀಡುವುದು)

ವೈಜ್ಞಾನಿಕ ಜ್ಞಾನ ಬೆಳೆಸುವ ತಂತ್ರಾಂಶಗಳು

ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–

೧೪೮೦ (೧೭೪೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸ್ತುತ ಸರ್ಕಾರ ಅಸ್ತಿತ್ವಕ್ಕೆ ಬಂದಾಗಿನಿಂದ ಇಲ್ಲಿಯವರೆಗೆ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ವತಿಯಿಂದ ಕೈಗೊಂಡ ಯೋಜನೆಗಳು ಯಾವುವು ;

(ಆ) ಇಲಾಖೆಯಿಂದ ನಿರ್ಮಿಸಲಾದ ವಿಜ್ಞಾನ ಭವನಗಳು, ತಾರಾಲಯಗಳು ಹಾಗೂ ಇನ್ನಿತರ ವೈಜ್ಞಾನಿಕ ಜ್ಞಾನವನ್ನು ಬೆಳೆಸುವ ತಂತ್ರಾಂಶಗಳನ್ನು ಅಭಿವೃದ್ಧಿಪಡಿಸಲಾಗಿದೆಯೆ ; ಹಾಗಿದ್ದಲ್ಲಿ, ವಿವರ ನೀಡುವುದು ;

(ಇ) ಜಿಲ್ಲೆಗೊಂದು ತಾರಾಲಯವನ್ನು ನಿರ್ಮಿಸಲು ಸರ್ಕಾರ ಆಲೋಚನೆ ಮಾಡುವುದೇ ?

ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಬೋಧಕ ಹಾಗೂ ಬೋಧಕೇತರ ಹುದ್ದೆಗಳನ್ನು ತುಂಬುವ ಕುರಿತು

ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–

೧೪೮೧ (೧೭೪೭) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯ ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಬೋಧಕ ಹಾಗೂ ಬೋಧಕೇತರ ಹುದ್ದೆಗಳನ್ನು ತುಂಬದೇ ಇರುವುದರಿಂದ ಗುಣಮಟ್ಟದ ವೈದ್ಯಕೀಯ ಶಿಕ್ಷಣ ದೊರೆಯದೆ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪ್ರಸ್ತುತ ಸದರಿ ಸಂಸ್ಥೆಗೆ ಮಂಜೂರಾಗಿರುವ ಬೋಧಕ ಹಾಗೂ ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ಮತ್ತು ಯಾವುವು ;

(ಇ) ಮಂಜೂರಾಗಿರುವ ಎಲ್ಲಾ ಬೋಧಕ ಹಾಗೂ ಬೋಧಕೇತರ ಹುದ್ದೆಗಳನ್ನು ತುಂಬಲಾಗಿದೆಯೇ ; ತುಂಬಲಾಗದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸದರಿ ಹುದ್ದೆಗಳನ್ನು ತುಂಬಲಾಗುವುದು ?

ಅನುದಾನಿತ ಶಾಲಾ ಶಿಕ್ಷಕರಿಗೆ ಜ್ಯೋತಿ ಸಂಜೀವಿನಿ ಸೌಲಭ್ಯವನ್ನು ನೀಡದೆ ಇರುವ ಕುರಿತು

ಡಾ॥ ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ) :–

೧೪೮೨ (೧೭೦೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಸರ್ಕಾರಿ ನೌಕರರಿಗೆ ನೀಡುತ್ತಿರುವ ವೈದ್ಯಕೀಯ ಸವಲತ್ತಾದ ಜ್ಯೋತಿ ಸಂಜೀವಿನಿ ಸೌಲಭ್ಯವನ್ನು ಅನುದಾನಿತ ಶಾಲಾ ಶಿಕ್ಷಕರಿಗೆ

ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು ; ಮತ್ತು ಯಾವ ಕಾಲಮಿತಿಯೊಳಗೆ ಜಾರಿಗೆ ತರಲಾಗುವುದು ?

ಅನುದಾನಿತ ಶಾಲಾ ಶಿಕ್ಷಕರಿಗೆ ಮತ್ತು ಉಪನ್ಯಾಸಕರಿಗೆ ಕಾಲ್ಪನಿಕ ವೇತನ ಬಡ್ತಿ ಕುರಿತು

ಡಾ॥ ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ) :–

೧೪೮೩ (೧೬೮೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನುದಾನಿತ ಶಾಲಾ ಶಿಕ್ಷಕರಿಗೆ ಮತ್ತು ಉಪನ್ಯಾಸಕರಿಗೆ ಕಾಲ್ಪನಿಕ ವೇತನ ಬಡ್ತಿ ಮಂಜೂರಿಗೆ ಸಂಬಂಧಿಸಿದಂತೆ ವರದಿ ನೀಡಲು ಶ್ರೀ ಬಸವರಾಜ ಹೊರಟ್ಟಿಯವರ ಅಧ್ಯಕ್ಷತೆಯಲ್ಲಿ ರಚಿಸಿದ ಸಮಿತಿಯ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದೆಯೇ ;

(ಆ) ಸಲ್ಲಿಸಿದ್ದಲ್ಲಿ, ಸದರಿ ಸಮಿತಿಯವರು ನೀಡಿರುವ ವರದಿಯನ್ನು ಯಥಾವತ್ತಾಗಿ ಜಾರಿಗೊಳಿಸಲು ಸರ್ಕಾರಕ್ಕೆ ಬೇಕಾಗುವ ಕಾಲಾವಕಾಶ ಎಷ್ಟು; ಈ ವಿಷಯದ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು ?

ರಾಜ್ಯದಲ್ಲಿಯ ಸ್ವಾಯುತ್ತ ನರ್ಸಿಂಗ್ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ಕುರಿತು

ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) :–

೧೪೮೪ (೧೮೩೩) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಸ್ವಾಯುತ್ತ (ಅರೆಕಾಲಿಕಾ) ನರ್ಸಿಂಗ್ ಕಾಲೇಜುಗಳಿವೆ ;

(ಆ) ಈ ನರ್ಸಿಂಗ್ ಕಾಲೇಜುಗಳಲ್ಲಿ ಎಷ್ಟು ನರ್ಸಿಂಗ್ ಹಾಗೂ ಪ್ಯಾರಾ ಮೆಡಿಕಲ್ ಸಿಬ್ಬಂದಿಗಳು ಖಾಯಂ ಆಧಾರದ ಮೇಲೆ ಹಾಗೂ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿದ್ದಾರೆ ; (ಪ್ರತಿ ಕಾಲೇಜುವಾರು ಮಾಹಿತಿ ನೀಡುವುದು)

(ಇ) ಸದ್ಯ ಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ಖಾಯಂ ಮಾಡುವ ಚಿಂತನೆ ಸರ್ಕಾರದ ಪರಿಶೀಲನೆಯಲ್ಲಿ ಇದೆಯೇ ; ಮತ್ತು ಈ ಹಿಂದೆ ಈ ರೀತಿ ಖಾಯಂ ಮಾಡಿದ ಉದಾಹರಣೆಗಳು ಇದೆಯೇ ? (ವಿವರ ನೀಡುವುದು)

ಖಾಸಗಿ ಕಂಪನಿಗಳಲ್ಲಿ ಗುತ್ತಿಗೆ ಅಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವವರ ಕುರಿತು

ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–

೧೪೮೫ (೧೭೬೯) ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಖಾಸಗೀ ಕಂಪನಿಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಕಾರ್ಮಿಕರ ಹಿತ ರಕ್ಷಣೆಗಳನ್ನು ಕಾಪಾಡುವ ನಿಟ್ಟಿನಲ್ಲಿ ಸರ್ಕಾರವು ಖಾಸಗೀ ಕಂಪನಿಗಳ ಮೇಲೆ ನಿಯಂತ್ರಣ ಸಾಧಿಸಲು ಅವಕಾಶವಿದೆಯೇ; ಇದ್ದಲ್ಲಿ, ರೂಪಿಸಲಾದ ನಿಯಮಗಳೇನು ;

(ಆ) ಖಾಸಗೀ ಕಂಪನಿಗಳಲ್ಲಿ ಸುಮಾರು ೧೦ ರಿಂದ ೨೦ ವರ್ಷಗಳ ದೀರ್ಘಕಾಲ ಸೇವೆಯನ್ನು ಸಲ್ಲಿಸುತ್ತಿರುವ ಕಾರ್ಮಿಕರುಗಳನ್ನು ಏಕಾಏಕಿ ಯಾವುದೇ ಪರಿಹಾರ ಇಲ್ಲದೇ ಹೊರಹಾಕುತ್ತಿದ್ದು, ಈ ಬಗ್ಗೆ ಕಾರ್ಮಿಕರ ಹಿತಕಾಯುವ ಉದ್ದೇಶದಿಂದ ಸರ್ಕಾರ ಕೈಗೊಳ್ಳುವ ಕ್ರಮಗಳೇನು ;

(ಇ) ಕಳೆದ ೦೩ ವರ್ಷಗಳಿಂದ ರಾಜ್ಯದ ಇಂತಹ ಎಷ್ಟು ಕಂಪನಿಗಳ ವಿರುದ್ಧ ಸರ್ಕಾರ ಕ್ರಮಕೈಗೊಂಡಿದೆ ? (ಸಂಪೂರ್ಣ ಮಾಹಿತಿ ನೀಡುವುದು)

ಕಾಡಾನೆ ಕಾರಿಡಾರ್‌ನಲ್ಲಿ ಆಗುವ ಅವಘಡಗಳ ಕುರಿತು

ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :-

೧೪೮೬ (೧೭೫೬) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ೦೩ ವರ್ಷಗಳಿಂದ ರಾಜ್ಯದಲ್ಲಿ ಎಷ್ಟು ಜನ ಕಾಡಾನೆ ಹಾವಳಿಯಿಂದ ಮೃತಪಟ್ಟಿದ್ದಾರೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಾಡಾನೆ ಬರುವ ಕಾರಿಡಾರಿನಲ್ಲಿ ಕಬ್ಬು/ತರಕಾರಿ, ಬಾಳೆಗಿಡ ಹಾಕುವ ರೈತರಿಗೆ ಜಾಗೃತಿ ಮೂಡಿಸುವ ಹಾಗೂ ಪರ್ಯಾಯ ಸ್ಥಳಗಳ ಬಗ್ಗೆ ಸರ್ಕಾರ ಕ್ರಮ ತೆಗೆದುಕೊಂಡಿದೆಯೇ ; (ವಿವರ ನೀಡುವುದು)

(ಇ) ಮೃತರ ಕುಟುಂಬಕ್ಕೆ ಸರ್ಕಾರದಿಂದ ಎಷ್ಟು ಹಣ ಪರಿಹಾರ ನೀಡಲಾಗಿದೆ; ಬಾಕಿ ಇರುವವರಿಗೆ ಯಾವಾಗ ಪರಿಹಾರ ನೀಡಲಾಗುವುದು; ಪರಿಹಾರ ನೀಡಲು ವಿಳಂಬವಾಗಲು ಕಾರಣವೇನು ; (ವಿವರ ನೀಡುವುದು)

(ಈ) ಕಾಡಾನೆ ಹಾವಳಿ ತಡೆಯಲು ಸರ್ಕಾರ ತೆಗೆದುಕೊಂಡ ಕ್ರಮವೇನು; ಇದಕ್ಕಾಗಿ, ಮೀಸಲಿಟ್ಟ ಅನುದಾನವೆಷ್ಟು ? (ಜಿಲ್ಲಾವಾರು ವಿವರ ನೀಡುವುದು)

ಸರ್ಕಾರಿ ಆಸ್ಪತ್ರೆಗಳಲ್ಲಿ ೨೪ ಗಂಟೆಯ ಮರಣೋತ್ತರ ಪರೀಕ್ಷೆ ಮಾಡುವ ಬಗ್ಗೆ

ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–

೧೪೮೭ (೧೭೬೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೆಚ್ಚಾಗಿ ಜನರು ವಾಸಿಸುವ ನಗರ ಪ್ರದೇಶಗಳಲ್ಲಿ ಮರಣೋತ್ತರ ಪರೀಕ್ಷೆ (Post Mortem) ವಿಧಾನಕ್ಕೆ ಹೆಚ್ಚಿನ ಸಮಯವು ತೆಗೆದುಕೊಳ್ಳುವುದರಿಂದ ಈ ವ್ಯವಸ್ಥೆಯನ್ನು ನಿರ್ವಹಿಸುವ ವಿಭಾಗಗಳು ೨೪ ಗಂಟೆಗಳ ಕಾಲ ಕೆಲಸ ನಿರ್ವಹಿಸುತ್ತಿವೆಯೇ ;

(ಆ) ರಾಜ್ಯದ ಕೆಲವೊಂದು ಆಸ್ಪತ್ರೆಗಳಲ್ಲಿ ಸೀಮಿತ ಅವಧಿಗೆ ಮಾತ್ರ ಕರ್ತವ್ಯ ನಿರ್ವಹಿಸುತ್ತಿರುವುದರಿಂದ ನೊಂದ ಜನರು ದಯನೀಯ ಪರಿಸ್ಥಿತಿಯಲ್ಲಿರುವುದು ಸರ್ಕಾರದ ಗಮನದಲ್ಲಿದೆಯೇ; ಹಾಗಿದ್ದಲ್ಲಿ, ಈ ಕುರಿತು ಸರ್ಕಾರದ ಕ್ರಮಗಳೇನು ;

(ಇ) ಮರಣೋತ್ತರ ಪರೀಕ್ಷೆ (Post Mortem) ಯಂತಹ ಆತಂಕ ಮತ್ತು ದುಃಖಕರ ಪರಿಸ್ಥಿತಿಯಲ್ಲಿ ಸಂಬಂಧಿಕರು ಕಾಯುವುದನ್ನು ತಪ್ಪಸಲು ದಿನದ ೨೪ ಗಂಟೆಯು ಕಾರ್ಯನಿರ್ವಸುವ ಬಗ್ಗೆ ಸರ್ಕಾರದ ಕ್ರಮಗಳೇನು ?

ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಕುರಿತು

ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–

೧೪೮೮ (೧೭೫೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು; ಸದರಿ ಕಾಲೇಜುಗಳಲ್ಲಿ ಮಂಜೂರಾದ ಬೋಧಕ ಮತ್ತು ಬೋಧಕೇತರ ಹುದ್ದೆಗಳು ಎಷ್ಟು; (ವಿವರ ನೀಡುವುದು)

(ಆ) ಸದರಿ ಕಾಲೇಜುಗಳಲ್ಲಿ ನಿವೃತ್ತಿ, ಮರಣ ಹಾಗೂ ವರ್ಗಾವಣೆಯಿಂದಾಗಿ ಎಷ್ಟು ಹುದ್ದೆಗಳು ಖಾಲಿ ಇವೆ; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಹುದ್ದೆಗಳ ಭರ್ತಿಗೆ ಅನುಮತಿ ನೀಡದೇ ಇರುವುದರಿಂದ ಉನ್ನತ ಶಿಕ್ಷಣದಿಂದ ವಿದ್ಯಾರ್ಥಿಗಳು ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಕೇರಳ ತ್ಯಾಜ್ಯವನ್ನು ಕರ್ನಾಟಕದ ಗುಂಡ್ಲುಪೇಟೆಯಲ್ಲಿ ಸುರಿಯುತ್ತಿರುವ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೧೪೮೯ (೧೭೮೦) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇರಳದ ಕಸಾಯಿಖಾನೆ, ಖಾಸಗಿ ನರ್ಸಿಂಗ್ ಹೋಮ್‌ಗಳ ಹಾಗೂ ಇತರೆ ಅಪಾಯಕಾರಿ ತ್ಯಾಜ್ಯಗಳನ್ನು ರಾಜ್ಯದ ಗುಂಡ್ಲುಪೇಟೆಯಲ್ಲಿ ತಂದು ಸುರಿಯುತ್ತಿರುವ ವರದಿ

ದಿನಪತ್ರಿಕೆಯಲ್ಲಿ ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಗುಂಡ್ಲುಪೇಟೆಯ ಖಾಸಗಿ ಜಮೀನಿನ ಮಾಲೀಕರು ಹಣದ ಆಮಿಷದಿಂದ ತ್ಯಾಜ್ಯ ಸುರಿತಕ್ಕೆ ಅವಕಾಶ ಮಾಡಿಕೊಟ್ಟಿದ್ದು, ಲೋಡುಗಟ್ಟಲೆ ಬರುವ ತ್ಯಾಜ್ಯಗಳಿಂದ ಪರಿಸರ ಹಾಗೂ ಅಂತರ್ಜಲ ಕೂಡಾ ಕಲುಷಿತವಾಗುವ ಬಗ್ಗೆ ಸ್ಥಳಿಯರಿಂದ ದೂರು ದಾಖಲಾಗಿದೆಯೇ ;

(ಇ) ದಾಖಲಾಗಿದ್ದಲ್ಲಿ, ಸ್ಥಳೀಯ ಆಡಳಿತದಿಂದ ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ;

(ಈ) ಬಂಡೀಪುರ ಅರಣ್ಯ ಇಲಾಖೆ ವ್ಯಾಪ್ತಿಯಲ್ಲಿ ಅರಣ್ಯ ಇಲಾಖೆ ಹಾಗೂ ಪೊಲೀಸ್ ಚೆಕ್ ಪೋಸ್ಟ್‌ಗಳಿದ್ದರೂ ತ್ಯಾಜ್ಯ ರವಾನೆಯಾಗುವ ಕುರಿತು ಸರ್ಕಾರ ತನಿಖೆ ಕೈಗೊಳ್ಳುವುದೇ ;

(ಉ) ಗುಂಡ್ಲುಪೇಟೆ ತಾಲ್ಲೂಕಿನಾದ್ಯಂತ ಹಲವಾರು ಭಾಗಗಳಲ್ಲಿ ಈ ರೀತಿ ತ್ಯಾಜ್ಯ ಸುರಿಯಲಾಗುತ್ತಿದ್ದು, ಇದರಿಂದಾಗುವ ದುಷ್ಪರಿಣಾಮವನ್ನು ತಪ್ಪಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

ಬಂಡೀಪುರ ಅಭಯಾರಣ್ಯದಲ್ಲಿ ಎಲಿವೇಟೆಡ್ ರಸ್ತೆ ನಿರ್ಮಾಣದ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೧೪೯೦ (೧೭೭೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಬಂಡೀಪುರ ಆಭಯಾರಣ್ಯದ ೫ ಭಾಗಗಳಲ್ಲಿ ಎಲಿವೇಟೆಡ್ ರಸ್ತೆ ನಿರ್ಮಾಣದ ಬಗ್ಗೆ ಸರ್ಕಾರದ ನಿಲುವೇನು;

(ಆ) ಎಲಿವೇಟೆಡ್ ರಸ್ತೆ ನಿರ್ಮಾಣ ಮಾಡಿದಲ್ಲಿ ಈಗ ಇರುವ ರಾತ್ರಿ ಸಂಚಾರ ನಿಷೇಧವನ್ನು ತೆರವುಗೊಳಿಸಲಾಗುವುದೇ ;

(ಇ) ಬಂಡೀಪುರ ರಾಷ್ಟ್ರೀಯ ಹೆದ್ದಾರಿಯಲ್ಲಿ ರಾತ್ರಿ ವೇಳೆ ವಾಹನ ಸಂಚಾರ ಮರು ಆರಂಭಕ್ಕೆ ಕೇರಳ ಸರ್ಕಾರ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರುತ್ತಿದ್ದು, ಈ ಕುರಿತು ಸರ್ಕಾರ ಯಾವ ತೀರ್ಮಾನ ಕೈಗೊಂಡಿದೆ?

ಕರ್ನಾಟಕದಿಂದ ಗೋವಾಕ್ಕೆ ವಿದ್ಯುತ್ ಲೈನ್ ಎಳೆಯುವ ವಿಷಯದ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೧೪೯೧ (೧೭೭೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗೋವಾ ಸರ್ಕಾರವು ಧಾರವಾಡ ಸಮೀಪದ ನರೇಂದ್ರದಿಂದ ಗೋವಾಕ್ಕೆ ವಿದ್ಯುತ್ ಲೈನ್ ಎಳೆಯಲು ಬೆಳಗಾವಿ, ಧಾರವಾಡ, ಉತ್ತರ ಕನ್ನಡವೂ ಸೇರಿದಂತೆ ರಾಜ್ಯದ ಮೂರು ಜಿಲ್ಲೆಗಳ ಅರಣ್ಯ ಭೂಮಿಯ ಪರಿವರ್ತನೆಗಾಗಿ ಕೇಂದ್ರ ಅರಣ್ಯ ಸಚಿವಾಲಯಕ್ಕೆ ಪ್ರಸ್ತಾವನೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಅನ್ಯ ರಾಜ್ಯದ ಪ್ರಯೋಜನಕ್ಕಾಗಿ ನಮ್ಮ ರಾಜ್ಯದ ಅರಣ್ಯ ಸಂಪತ್ತು ನಾಶ ಮಾಡುವುದಕ್ಕೆ ಈಗಾಗಲೇ ಪರಿಸರವಾದಿಗಳು ವಿರೋಧ ವ್ಯಕ್ತಪಡಿಸುತ್ತಿದ್ದು, ಇದರ ಕುರಿತು ಸರ್ಕಾರದ ನಿಲುವೇನು ;

(ಇ) ಉತ್ತರ ಕನ್ನಡದ ದಾಂಡೇಲಿ ಆನೆಧಾಮ, ದಾಂಡೇಲಿ ವನ್ಯಜೀವಿ ಸುರಕ್ಷಿತ ವಲಯ ಹಾಗೂ ಬೆಳಗಾವಿ ಜಿಲ್ಲೆಯ ಭೀಮಗಡದ

ಪರಿಸರ ಸೂಕ್ಷ್ಮ ವಲಯದ ಮೂಲಕ ಪ್ರಸ್ತಾಪಿತ ವಿದ್ಯುತ್ ಲೈನ್ ಹಾದು ಹೋಗುತ್ತಿದ್ದು, ಇದರಿಂದ ಪರಿಸರಕ್ಕೆ ಧಕ್ಕೆಯುಂಟಾಗುತ್ತಿದ್ದು, ಇದನ್ನು ತಪ್ಪಿಸುವ ನಿಟ್ಟಿನಲ್ಲಿ ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಈ) ಅರಣ್ಯ ನಾಶದ ಭೀತಿ ಇರುವ ಸದರಿ ಮಾರ್ಗದ ಬದಲು ಗೋವಾ ಸರ್ಕಾರ ಬದಲಿ ಮಾರ್ಗದ ಪರ್ಯಾಯ ವ್ಯವಸ್ಥೆ ಮಾಡಿಕೊಳ್ಳುವಂತೆ ಮಾಡಲು ಗೋವಾ ಸರ್ಕಾರ ಹಾಗೂ ಕೇಂದ್ರದ ಮೇಲೆ ಒತ್ತಡ ಹಾಕುವ ಯೋಜನೆ ಸರ್ಕಾರಕ್ಕೆ ಇದೆಯೇ ?

ನಿಪ್ಪಾಣಿ ತಾಲ್ಲೂಕಿನ ಸರ್ಕಾರಿ ಶಾಲೆಗಳ ಸ್ವಂತ ಕಟ್ಟಡದ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೧೪೯೨ (೧೭೭೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆ, ನಿಪ್ಪಾಣಿ ತಾಲ್ಲೂಕಿನ ಅನೇಕ ಸರ್ಕಾರಿ ಶಾಲೆಗಳಿಗೆ ಸ್ವಂತ ಕಟ್ಟಡ ಇಲ್ಲದೇ ಮರಗಳ ಕೆಳಗೆ ತರಗತಿ ನಡೆಸುತ್ತಿರುವ ವಿಷಯ ಪತ್ರಿಕೆಗಳಲ್ಲಿ ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತು ಸರ್ಕಾರದ ಪ್ರತಿಕ್ರಿಯೆ ಏನು ;

(ಆ) ನಿಪ್ಪಾಣಿ ತಾಲ್ಲೂಕಿನಲ್ಲಿ ಎಷ್ಟು ಸರ್ಕಾರಿ ಶಾಲೆಗಳಿವೆ; ಅವುಗಳಲ್ಲಿ ಸ್ವಂತ ಕಟ್ಟಡ ಇರುವ ಶಾಲೆಗಳ ಸಂಖ್ಯೆ ಹಾಗೂ ಸ್ವಂತ ಕಟ್ಟಡ ಇಲ್ಲದಿರುವ ಶಾಲೆಗಳ ಸಂಖ್ಯೆ ಎಷ್ಟು ;

(ಇ) ಶಾಲೆಗಳಿಗೆ ಸ್ವಂತ ಕಟ್ಟಡ ಸೌಲಭ್ಯ ಒದಗಿಸದೇ ಇರಲು ಕಾರಣವೇನು ;

(ಈ) ಸ್ವಂತ ಕಟ್ಟಡಗಳಿಲ್ಲದ ಶಾಲೆಗಳಿಗೆ ಕಟ್ಟಡ ನಿರ್ಮಿಸಿಕೊಡುವ ಉದ್ದೇಶ ಸರ್ಕಾರಕ್ಕಿದೆಯೇ ;

(ಉ) ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲಾಗುವುದು ?

ವೈದ್ಯ ಸೀಟುಗಳನ್ನು ಬ್ಲಾಕ್ ಮಾಡಿ ಹೆಚ್ಚಿನ ಹಣಕ್ಕೆ ಮಾರುವ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೧೪೯೩ (೧೭೭೭) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ವೈದ್ಯಕೀಯ ಕಾಲೇಜುಗಳ ವೈದ್ಯ ಸೀಟುಗಳನ್ನು ಬ್ಲಾಕ್ ಮಾಡಿಸಿ ಹೆಚ್ಚಿನ ಹಣಕ್ಕೆ ಬೇರೆ ರಾಜ್ಯದ ವಿದ್ಯಾರ್ಥಿಗಳಿಗೆ ಮಾರಾಟ ಮಾಡುವ ದಂಧೆ ಇತ್ತೀಚೆಗೆ ವ್ಯಾಪಕವಾಗಿ ಹರಡುತ್ತಿರುವುದನ್ನು ದಿನಪತ್ರಿಕೆಗಳು ವರದಿ ಮಾಡಿರುವುದನ್ನು ಸರ್ಕಾರ ಗಮನಿಸಿದೆಯೇ; ಗಮನಿಸಿದ್ದಲ್ಲಿ, ಈ ಕುರಿತು ಸರ್ಕಾರದ ಪ್ರತಿಕ್ರಿಯೆ ಏನು ;

(ಆ) ಸದರಿ ದಂಧೆಯಲ್ಲಿ ಪರೋಕ್ಷವಾಗಿ ಕಾಲೇಜು ಆಡಳಿತ ಮಂಡಳಿಗಳೂ ಶಾಮೀಲಾಗಿರುವ ಬಗ್ಗೆ ದೂರುಗಳು ದಾಖಲಾಗಿವೆಯೇ ;

(ಇ) ದೂರು ದಾಖಲಾಗಿದ್ದಲ್ಲಿ, ಕಾಲೇಜುಗಳ ಹೆಸರು ತಿಳಿಸುವುದು; ಹಾಗೂ ಸದರಿ ಕಾಲೇಜುಗಳ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ಪ್ರತಿಭಾವಂತ ವಿದ್ಯಾರ್ಥಿಗಳು ಅವಕಾಶ ವಂಚಿತರಾಗುವ ಇಂತಹ ದಂಧೆಯನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ?

ಉದ್ಯಮ ಶೀಲತಾಯೋಜನೆಯಲ್ಲಿ ತಾರಾತಮ್ಯ ಮಾಡುತ್ತಿರುವ ಕುರಿತು

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–

೧೪೯೪ (೧೭೦೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨೦೧೫–೧೬ ರ ರಿಂದ ೨೦೧೮–೨೦೧೯ ನೇ ಸಾಲಿನ ವರೆಗೆ ಬೀದರ್ ಜಿಲ್ಲೆಯಲ್ಲಿ ಉದ್ಯಮ ಶೀಲತಾಯೋಜನೆ ಅಡಿ ಆಯ್ಕೆಯಾಗಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಆ) ಈ ಯೋಜನೆಯಲ್ಲಿನ ಗುರಿಗಳಿಗೆ ಅನುಗುಣವಾಗಿ ಸಾಧನೆ ಮಾಡಲಾಗಿದೆಯೇ; ಮಾಡಿದ್ದಲ್ಲಿ, ಫಲಾನುಭವಿಗಳವಾರು, ಸಾಲದ ಉದ್ದೇಶವಾರು, ಮತ್ತು ಘಟಕ ಪ್ರಾರಂಭವಾಗಿರುವ ಬಗ್ಗೆ ಫಲಾನುಭವಿಗಳ ಹೆಸರು, ವಿಳಾಸದೊಂದಿಗೆ ವರ್ಷವಾರು, ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ವಿವರ ನೀಡುವುದು ;

(ಇ) ಈ ವಿವಿಧ ಯೋಜನೆಗಳಲ್ಲಿ ಆಯ್ಕೆ ಮಾಡುವಲ್ಲಿ ಅಧಿಕಾರಿಗಳು ಮಧ್ಯವರ್ತಿಗಳೊಂದಿಗೆ ಕೈಜೋಡಿಸಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ಅಧಿಕಾರಿ/ನೌಕರರ ವಿರುದ್ದ ಸರ್ಕಾರ ಕೈಗೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

ಖಾಸಗಿ ಶಿಕ್ಷಣ ಸಂಸ್ಥೆಗಳು

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–

೧೪೯೫ (೧೭೩೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳು ಸಾರ್ವಜನಿಕರಿಂದ ವಿಪರೀತ ಡೊನೇಷನ್ ಅಥವಾ ಶುಲ್ಕ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ವಿದ್ಯಾರ್ಥಿಗಳಿಂದ ಇಂತಿಷ್ಟೆ ಡೊನೇಷನ್ ಅಥವಾ ಶುಲ್ಕವನ್ನು ತೆಗೆದುಕೊಳ್ಳಬೇಕೆಂದು ಸರ್ಕಾರ ಸುತ್ತೋಲೆ ಹೊರಡಿಸಿದೆಯೇ ; (ಸುತ್ತೋಲೆ ಪ್ರತಿ ಒದಗಿಸುವುದು)

(ಇ) ಸರ್ಕಾರದ ಸೂಚನೆಗಿಂತ ಹೆಚ್ಚು ಡೊನೇಷನ್ ಅಥವಾ ಶುಲ್ಕ ವಸೂಲು ಮಾಡಿರುವ ಶಾಲೆಗಳ ವಿರುದ್ಧ ಯಾವುದಾದರೂ ದೂರು ದಾಖಲಾಗಿದೆಯೇ ; ಇದ್ದಲ್ಲಿ, ಎಷ್ಟು ದೂರುಗಳು ದಾಖಲಾಗಿವೆ ; (ಸಂಪೂರ್ಣ ತಾಲ್ಲೂಕುವಾರು, ಶಾಲೆ/ ಕಾಲೇಜುಗಳವಾರು ಮಾಹಿತಿ ನೀಡುವುದು)

(ಈ) ಸರ್ಕಾರದ ಸೂಚನೆಗಿಂತ ಹೆಚ್ಚು ಡೊನೇಷನ್ ಅಥವಾ ಶುಲ್ಕ ವಸೂಲಿ ಮಾಡಿದ ಶಿಕ್ಷಣ ಸಂಸ್ಥೆಗಳ ವಿರುದ್ಧ ಸರ್ಕಾರ ಕೈಗೊಳ್ಳುವ ಕ್ರಮವೇನು ?

ಬೀದರ್ ಜಿಲ್ಲೆಯ ಕಾಡು ಪ್ರಾಣಿಗಳ ಹಾವಳಿ ಕುರಿತು

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–

೧೪೯೬ (೧೭೩೩) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಕಾಡು ಪ್ರಾಣಿಗಳ ಹಾವಳಿಯಿಂದಾದ ಬೆಳೆ ನಷ್ಟಕ್ಕೆ ಪರಿಹಾರ ಕೋರಿ ಅರ್ಜಿ ಸಲ್ಲಿಸಿದ ಅರ್ಜಿಗಳ ಸಂಖ್ಯೆ ಎಷ್ಟು ; (ಅರ್ಜಿದಾರರ ಹೆಸರು ಗ್ರಾಮದ ವಿಳಾಸ ನೀಡುವುದು)

(ಆ) ಅವುಗಳಲ್ಲಿ ಪರಿಹಾರ ನೀಡದೆ ತಿರಸ್ಕೃತವಾದ ಮತ್ತು ಬಾಕಿಯಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ನೀಡಲಾದ ಪರಿಹಾರ ಮೊತ್ತವೆಷ್ಟು ; ಅರ್ಜಿಗಳನ್ನು ಇತ್ಯರ್ಥ ಪಡಿಸಲು ಇಲಾಖೆಯ ಕ್ರಮವೇನು ; (ವರ್ಷವಾರು, ತಾಲ್ಲೂಕುವಾರು, ವಿಧಾನಸಭಾ ಕ್ಷೇತ್ರವಾರು, ಗ್ರಾಮವಾರು ವಿವರ ನೀಡುವುದು)

(ಇ) ಕಾಡು ಪ್ರಾಣಿಗಳಿಂದ ರೈತರ ಬೆಳೆ ಹಾನಿಯ ನಷ್ಟಕ್ಕೆ ಪರಿಹಾರ ನೀಡಲು ಇಲಾಖೆಯಿಂದ ಹೊರಡಿಸಲಾದ ಮಾರ್ಗದರ್ಶಿ ಆದೇಶ ಯಾವುವು ; ಮಂಗಳ ಹಾವಳಿಯಿಂದ ಉಂಟಾದ ಬೆಳೆ ಹಾನಿಗೆ ಇಲಾಖೆಯಿಂದ ಪರಿಹಾರ ನೀಡಲು ಅನುಸರಿಸುವ ಮಾರ್ಗಸೂಚಿ ಯಾವುವು ? (ಸಂಪೂರ್ಣ ಮಾಹಿತಿ ನೀಡುವುದು)

ಭಾಷಾ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–

೧೪೯೭ (೧೭೨೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಭಾಷಾ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳ ವ್ಯಾಖ್ಯಾನವೇನು ; ಭಾಷಾ ಅಲ್ಪಸಂಖ್ಯಾತರ ಶಾಲೆಗಳಿಗೆ ಸರ್ಕಾರ ನೀಡುತ್ತಿರುವ ರಿಯಾಯಿತಿಗಳೇನು ; ಈ ಶಿಕ್ಷಣ ಸಂಸ್ಥೆಗಳು ಶಿಕ್ಷಣವನ್ನು ವ್ಯಾಪಾರದ ರೀತಿಯಲ್ಲಿ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ

ಬಂದಿದೆಯೇ ; ಅಂತಹ ಶಿಕ್ಷಣ ಸಂಸ್ಥೆಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಭಾಷಾ ಅಲ್ಪಸಂಖ್ಯಾತರ/ಧಾರ್ಮಿಕ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳಲ್ಲಿ ಆಯಾಯ ಭಾಷೆಯ/ಧರ್ಮದ ವಿದ್ಯಾರ್ಥಿಗಳ ಸಂಖ್ಯೆ ಕನಿಷ್ಠ ೫೦% ಇದ್ದರೆ ಮಾತ್ರ ಅಂತಹ ಶಿಕ್ಷಣ ಸಂಸ್ಥೆಗಳನ್ನು ಭಾಷಾ/ಧಾರ್ಮಿಕ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳು ಎಂದು ಪರಿಗಣಿಸುವ ಬಗ್ಗೆ ಸರ್ಕಾರದ ನಿಲುವೇನು ;

(ಇ) ಭಾಷಾ ಅಲ್ಪಸಂಖ್ಯಾತರ/ಧಾರ್ಮಿಕ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳಲ್ಲಿ ಆರ್‌ಟಿಇ ಅಡಿಯಲ್ಲಿ ಬಡವರ ಮಕ್ಕಳಿಗೆ ಪ್ರವೇಶಾತಿ ನೀಡದಿದ್ದಲ್ಲಿ, ಅಂತಹ ಶಿಕ್ಷಣ ಸಂಸ್ಥೆಗಳ ಮಾನ್ಯತೆಯನ್ನು ರದ್ದು ಪಡಿಸುವಲ್ಲಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಈ ಕುರಿತು ಸರ್ಕಾರದ ನಿಲುವೇನು ?

ಸೀಟು ಬ್ಲಾಕಿಂಗ್ ದಂಧೆಯ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–

೧೪೯೮ (೧೬೭೧) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವೈದ್ಯಕೀಯ ಕಾಲೇಜಿನಲ್ಲಿ ಸೀಟ್ ಬ್ಲಾಕಿಂಗ್ ದಂಧೆ ನಿಯಂತ್ರಿಸಲು ಹೊಸ ಕಾನೂನು ತರುವ ಪ್ರಸ್ತಾವ ಸರ್ಕಾರದ ಮುಂದಿದೆಯೇ ; ಈ ಕಾನೂನು ಎಂದಿನಿಂದ ಜಾರಿಗೆ ಬರುತ್ತದೆ ; ಸೀಟ್ ಬ್ಲಾಕಿಂಗ್ ದಂಧೆ ಮಾಡಿದ ಕಾಲೇಜು ಆಡಳಿತ ಮಂಡಳಿಯ ಮೇಲೆ ವಿಧಿಸುವ ದಂಡ ಮತ್ತು ಜೈಲು ಶಿಕ್ಷೆಯ ಬಗ್ಗೆ ಸರ್ಕಾರದ ನಿಲುವೇನು ;

(ಆ) ವೈದ್ಯಕೀಯ ಶಿಕ್ಷಣದಲ್ಲಿ ಯೋಗ ವಿಜ್ಞಾನವನ್ನು ಅಳವಡಿಸುವ ಕುರಿತು ಸರ್ಕಾರದ ನಿಲುವೇನು ; ಈ ಪಠ್ಯಕ್ರಮ ಯಾವ ಶೈಕ್ಷಣಿಕ ವರ್ಷದಿಂದ ಜಾರಿಗೆ ಬರುತ್ತದೆ ;

(ಇ) ಸರ್ಕಾರಕ್ಕೆ ವೈದ್ಯಕೀಯ ಪ್ರವೇಶಾತಿಯಲ್ಲಿ ಸೀಟು ಬಿಟ್ಟು ಕೊಡುವುದಾಗಿ ಕಾಲೇಜಿಗೆ ಮಾನ್ಯತೆ (ಅಫಿಲಿಯೇಷನ್) ಪಡೆಯುವಾಗ ಒಪ್ಪಂದ ಮಾಡಿಕೊಂಡು ತದನಂತರ ಸರ್ಕಾರಕ್ಕೆ ಸೀಟು ಬಿಟ್ಟುಕೊಡದ ವೈದ್ಯಕೀಯ ಕಾಲೇಜಿನ ಆಡಳಿತ ಮಂಡಳಿಯ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ; ಸರ್ಕಾರಕ್ಕೆ ಸೀಟು ಬಿಟ್ಟುಕೊಡದಿರುವ ವೈದ್ಯಕೀಯ ಕಾಲೇಜುಗಳ ಮಾನ್ಯತೆ ರದ್ದುಗೊಳಿಸುವ ಬಗ್ಗೆ ಸರ್ಕಾರದ ನಿಲುವೇನು ?

ಪರೀಕ್ಷಾ ಪ್ರಶ್ನೆ ಪತ್ರಿಕೆಗಳು ಸೋರಿಕೆಯಾಗುತ್ತಿರುವ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–

೧೪೯೯ (೧೬೭೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ ಯ ವಿದ್ಯಾರ್ಥಿಗಳು ವಾರ್ಷಿಕ ಪರೀಕ್ಷೆಗೆ ಹಾಜರಾಗುತ್ತಿರುವ ಸಮಯದಲ್ಲಿ ಪರೀಕ್ಷಾ ಪ್ರಶ್ನೆ ಪತ್ರಿಕೆಗಳು ಸೋರಿಕೆಯಾಗುತ್ತಿರುವ ಬಗ್ಗೆ ಪತ್ರಿಕಾ ಮಾಧ್ಯಮಗಳಲ್ಲಿ ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪ್ರಶ್ನೆ ಪತ್ರಿಕೆ ಸೋರಿಕೆಯಾಗದಂತೆ ತಡೆಯಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಪರೀಕ್ಷಾ ಅವ್ಯವಹಾರ ಮಾಡುವವರ ವಿರುದ್ಧ ಕಠಿಣ ಕಾನೂನು ತರಲು ಸರ್ಕಾರ ನಿರ್ಧರಿಸಿದೆಯೇ ; ಪ್ರಸ್ತುತ ಪರೀಕ್ಷಾ ಅವ್ಯವಹಾರ ಮಾಡುವವರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗುತ್ತಿದೆ ?

ವಿದೇಶ ವಿದ್ಯಾರ್ಥಿಗಳ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–

೧೫೦೦ (೧೬೭೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಎಷ್ಟು ಶಿಕ್ಷಣ ಸಂಸ್ಥೆಗಳಲ್ಲಿ ಅನ್ಯ ದೇಶದ ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದಾರೆ ; ಶಿಕ್ಷಣ ಸಂಸ್ಥೆಯ ಹೆಸರಿನೊಂದಿಗೆ ಜಿಲ್ಲಾವಾರು ವಿವರ ನೀಡುವುದು ;

(ಆ) ವಿದೇಶಿ ವಿದ್ಯಾರ್ಥಿಗಳು ರಾಜ್ಯದ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಪಡೆಯಲು ಇರುವ ನಿಯಮಗಳೇನು ; ಎಷ್ಟು ದೇಶದ ವಿದ್ಯಾರ್ಥಿಗಳು ರಾಜ್ಯದಲ್ಲಿದ್ದಾರೆ ; (ದೇಶವಾರು ವಿವರ ನೀಡುವುದು)

(ಇ) ವೀಸಾ ಅವಧಿ ಮುಗಿದ ಮೇಲೂ ವಿದೇಶಿ ವಿದ್ಯಾರ್ಥಿಗಳನ್ನು ಸಂಬಂಧಿಸಿದ ಶಿಕ್ಷಣ ಸಂಸ್ಥೆಗಳು ವಿದ್ಯಾಭ್ಯಾಸ ಮುಂದುವರೆಸಲು ಅನುಮತಿ ನೀಡುತ್ತಿವೆಯೇ ; ಯಾವ ನಿಯಮದ ಅನ್ವಯ ವೀಸಾ ಇಲ್ಲದಿದ್ದರೂ ಶಿಕ್ಷಣ ಸಂಸ್ಥೆಗಳು ಪ್ರವೇಶಾತಿ ನೀಡುತ್ತಿವೆ ;

(ಈ) ವೀಸಾ ಅವಧಿ ಮುಗಿದ ವಿದ್ಯಾರ್ಥಿಗಳ ಕುರಿತು ಶಿಕ್ಷಣ ಸಂಸ್ಥೆಗಳು ಸರ್ಕಾರಕ್ಕೆ ಮಾಹಿತಿ ನೀಡುತ್ತವೆಯೇ ; ನೀಡದೇ ಇರುವ ಶಿಕ್ಷಣ ಸಂಸ್ಥೆಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

ಅಗರ ಕೆರೆಯ ಅಂಗಳದಲ್ಲಿ ಅಮ್ಯೂಸ್‌ಮೆಂಟ್ ಪಾರ್ಕ್ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–

೧೫೦೧ (೧೭೨೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಗರ ಕೆರೆಯನ್ನು ಪುನರುಜ್ಜೀವನಗೊಳಿಸಲು ಖರ್ಚಾದ ವೆಚ್ಚವೆಷ್ಟು; ಈ ಮೊತ್ತವನ್ನು ಭರಿಸಿದವರು ಯಾರು ; ಈ ಯೋಜನೆಯಲ್ಲಿ ಖಾಸಗಿ ಸಂಸ್ಥೆಗಳ ಪಾತ್ರವೇನು ; ಅಗರ ಕೆರೆಯು ಯಾರ ಸುಪರ್ದಿಯಲ್ಲಿದೆ ;

(ಆ) ಅಗರ ಕೆರೆಯನ್ನು ರಕ್ಷಣೆ ಮತ್ತು ನಿರ್ವಹಣೆ ಹೆಸರಿನಲ್ಲಿ ಖಾಸಗಿಯವರಿಗೆ ವಹಿಸಿಕೊಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಖಾಸಗಿ ಸಂಸ್ಥೆಯವರೊಡನೆ ಸರ್ಕಾರ ಯಾವ ರೀತಿಯ ಒಪ್ಪಂದ ಮಾಡಿಕೊಂಡಿದೆ ;

(ಇ) ನಿರ್ವಹಣೆಯ ಗುತ್ತಿಗೆ ವಹಿಸಿದ ಖಾಸಗಿ ಸಂಸ್ಥೆಯವರು ಈ ಕೆರೆಯ ಅಂಗಳದಲ್ಲಿ ವಾಣಿಜ್ಯ ಚಟುವಟಿಕೆಗಳನ್ನು ಕೈಗೊಳ್ಳುವ ಸಂಬಂಧ ಸರ್ಕಾರದೊಂದಿಗೆ ಒಪ್ಪಂದ ಮಾಡಿಕೊಂಡಿರುತ್ತಾರೆಯೇ ; ವಾಣಿಜ್ಯ ಚಟುವಟಿಕೆಗಳನ್ನು ಕೈಗೊಳ್ಳಲು ಅಗರ ಕೆರೆಯಲ್ಲಿ ಅವಕಾಶವಿದೆ ಎಂಬುದಾಗಿ ಸಾರ್ವಜನಿಕರಿಗೆ ಮಾಹಿತಿ ನೀಡಿ ಅರ್ಹ ಸಂಸ್ಥೆಗಳಿಂದ ಟೆಂಡರ್ ಆಹ್ವಾನಿಸಲಾಗಿದೆಯೇ ; ಕೆರೆಗಳ ನಿರ್ವಹಣೆ ಎಂದರೆ ಅಮ್ಯೂಸ್‌ಮೆಂಟ್ ಪಾರ್ಕ್ ನಿರ್ಮಾಣ ಎಂದು ಕೆರೆಯ ನಿರ್ವಹಣೆಗಾಗಿ ಖಾಸಗಿ ಸಂಸ್ಥೆಯವರಿಗೆ ಕೆರೆಗಳನ್ನು ವಹಿಸಿಕೊಡುವಾಗ ಲಿಖಿತವಾಗಿ ಆದೇಶ ನೀಡಲಾಗಿದೆಯೇ ;

(ಈ) ಕೆರೆಯ ಅಂಗಳದಲ್ಲಿ ಅಮ್ಯೂಸ್‌ಮೆಂಟ್ ಪಾರ್ಕ್ ನಿರ್ಮಿಸಲು ನಿಯಮದಲ್ಲಿ ಅವಕಾಶವಿದೆಯೇ ; ಅಮ್ಯೂಸ್‌ಮೆಂಟ್ ಪಾರ್ಕ್ ಅಥವಾ ಯಾವುದೇ ವಾಣಿಜ್ಯ ಚಟುವಟಿಕೆಗಳನ್ನು ಕೆರೆಯ ಅಂಗಳದಲ್ಲಿ ನಿರ್ಮಿಸುವುದರಿಂದ ಕೆರೆಯ ನೈಸರ್ಗಿಕ ಪರಿಸರಕ್ಕೆ ಹಾನಿಯುಂಟಾಗುವುದು ಸರ್ಕಾರದ ಗಮನದಲ್ಲಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ?

ತಿ. ನರಸೀಪುರ ಸಾರ್ವಜನಿಕ ಆಸ್ಪತ್ರೆ ಸುತ್ತ ವಿದ್ಯುತ್ ದೀಪದ ವ್ಯವಸ್ಥೆ ಇಲ್ಲದಿರುವ ಕುರಿತು

ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೧೫೦೨ (೧೭೧೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಜಿಲ್ಲೆ, ತಿ. ನರಸೀಪುರ ಸಾರ್ವಜನಿಕ ಆಸ್ಪತ್ರೆಯ ಸುತ್ತಮುತ್ತ ವಿದ್ಯುತ್ ದೀಪದ ವ್ಯವಸ್ಥೆಯಿಲ್ಲದೆ, ಸಾರ್ವಜನಿಕರು ಹಾಗೂ ರೋಗಿಗಳು ರಾತ್ರಿ ವೇಳೆಯಲ್ಲಿ ಓಡಾಡಲು ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೂಡಲೇ ಈ ಆಸ್ಪತ್ರೆಯ ಆವರಣ ಹಾಗೂ ಸುತ್ತಮುತ್ತ ಪ್ರಖರ ವಿದ್ಯುತ್ ದೀಪಗಳ ವ್ಯವಸ್ಥೆ ಮಾಡಲಾಗುವುದೇ ;

(ಆ) ಈ ಆಸ್ಪತ್ರೆಯಲ್ಲಿ ಸ್ವಚ್ಛತೆಯ ಕೊರತೆ ಇರುವುದು, ಪ್ರತಿ ದಿನ ರೋಗಿಗಳ ಹಾಸಿಗೆ ಹೊದಿಕೆಯನ್ನು ಶುಚಿಗೊಳಿಸಿ ಬದಲಾಯಿಸದಿರುವುದು, ಇದರಿಂದ ರೋಗಿಗಳಿಗೆ ಸೋಂಕು ಹಾಗೂ ರೋಗ ಉಲ್ಬಣವಾಗುವ ಪರಿಸ್ಥಿತಿ ನಿರ್ಮಾಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸಂಬಂಧಪಟ್ಟವರ ಮೇಲೆ ಕೂಡಲೇ ಕ್ರಮ ಜರುಗಿಸಲಾಗುವುದೇ ?

ಮಕ್ಕಳಿಗೆ ಹಾಕುವ ಲಸಿಕೆಗಳ ಕೊರತೆ ಉಂಟಾಗಿರುವ ಕುರಿತು

ಶ್ರೀ ಸುನೀಲ್ ಗೌಡ ಬಸನಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೧೫೦೩ (೧೭೨೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಕ್ಕಳಿಗೆ (ವಯಸ್ಸು ೦–೫) ಹಾಕುವ ಲಸಿಕೆಗಳ ಕೊರತೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಯಾವ ಲಸಿಕೆಗಳ ಕೊರತೆ ಉಂಟಾಗಿದೆ ; (ಜಿಲ್ಲಾವಾರು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳವಾರು ದಾಸ್ತಾನು ವಿವರ ನೀಡುವುದು)

(ಇ) ಮುಖ್ಯವಾಗಿ ಐ.ಪಿ.ವಿ ಲಸಿಕೆಯ ಕೊರತೆ ತೀವ್ರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಲಸಿಕೆಯ ದಾಸ್ತಾನು ಮತ್ತು ಲಭ್ಯತೆಯ ವಿವರಗಳನ್ನು ಜಿಲ್ಲಾವಾರು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರವಾರು ವಿವರ ನೀಡುವುದು ;

(ಈ) ಕೊರತೆ ಉಂಟಾಗಿರುವ ಲಸಿಕೆಗಳನ್ನು ಪೂರೈಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಉ) ಹಾಗಿದ್ದಲ್ಲಿ, ಕೊರತೆ ಉಂಟಾಗಿರುವ ಲಸಿಕೆಗಳನ್ನು ಎಷ್ಟು ದಿನಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಪೂರೈಸಲಾಗುವುದು ?

ಕೆ. ಆರ್. ಮಹಾಲಕ್ಷ್ಮಿ
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0272/400 ಪ್ರತಿಗಳು/13–03–2020